# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 53 | SUNDAY 03-05-2026 | PRGI No : KNKAN/26/A0962 | Pages:4 | Rs.2.00 | M: 9742418836


## ಸಿಎಂ ಬದಲಾವಣೆ ಚರ್ಚೆಗೆ ಇನ್ನೂ ದಿನಾಂಕ ನಿಗದಿಯಾಗಿಲ್ಲ: ಖರ್ಗೆ



ಕಲಬುರಗಿ: ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆ ಕುರಿತು ಇನ್ನು ತೀರ್ಮಾನವಾಗಿಲ್ಲ. ಹೀಗಾಗಿ ಮುಖ್ಯಮಂತ್ರಿ ಬದಲಾವಣೆ ಆಗುತ್ತದೋ ಇಲ್ಲವೋ ಎಂಬುದನ್ನು ಈಗ ಹೇಗೆ ಹೇಳಲಿ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದರು.

ಕಲ್ಬುರ್ಗಿಯಲ್ಲಿಂದು ಸುದ್ಧಿಗಾರರೊಂದಿಗೆ ಮಾತನಾಡಿದ ಅವರು ಮುಖ್ಯಮಂತ್ರಿ ಬದಲಾವಣೆಗೆ ಇನ್ನು ಸಮಯ ನಿಗದಿಯಾಗಿಲ್ಲ. ಸಿಎಂ ಬದಲಾವಣೆ ಕುರಿತು ಚರ್ಚಿಸಲು ದಿನಾಂಕವೂ ನಿಗದಿಯಾಗಿಲ್ಲ. ಇದೆಲ್ಲಾ ನಿಗದಿಯಾದ ಮೇಲೆ ಏನು ನಿರ್ಧಾರ ಕೈಗೊಳ್ಳಬೇಕೋ ಅದನ್ನು ಕೈಗೊಳ್ಳುತ್ತೇವೆ ಎಂದರು.

ಪದೇ ಪದೇ ಮುಖ್ಯಮಂತ್ರಿ ಬದಲಾವಣೆ ಆಗುತ್ತಾ ಎಂದು ಕೇಳಿದರೆ ನಾನೇನು ಹೇಳಲಿ. ಈಗ ಸಿಎಂ ಬದಲಾವಣೆ ಆಗುತ್ತಾ ಆಗಲ್ಲವಾ ಎಂಬುದನ್ನು ಹೇಗೆ ಹೇಳಲಿ ಎಂದು ಖಾರವಾಗಿ ಪ್ರತಿಕ್ರಿಯಿಸಿದರು.

ಮುಖ್ಯಮಂತ್ರಿ ಬದಲಾವಣೆಗೆ ಸಮಯ ನಿಗದಿಯಾದ ಮೇಲೆ ನಾವೆಲ್ಲ ಅಂದರೆ ನಾನು, ಸೋನಿಯಾಗಾಂಧಿಯವರು, ರಾಹುಲ್ ಗಾಂಧಿಯವರು ಸೇರಿ ಚರ್ಚೆ ಮಾಡುತ್ತೇವೆ. ಯಾವ ನಿರ್ಧಾರ ಕೈಗೊಂಡರೆ ಪಕ್ಷಕ್ಕೆ ಒಳ್ಳೇಯದು ಯಾವ ನಿರ್ಧಾರ ಕೈಗೊಂಡರೆ ಪಕ್ಷದ ಮೇಲೆ ಯಾವ ರೀತಿ ಪರಿಣಾಮವಾಗಲಿದೆ ಎಂಬೆಲ್ಲಾ ಬಗ್ಗೆ ಚರ್ಚಿಸಿಯೇ ರಾಜ್ಯದ ಹಿತವನ್ನು ಗಮನದಲ್ಲಿಟ್ಟು ಕೊಂಡು ತೀರ್ಮಾನ ಮಾಡುತ್ತೇವೆ ಅದನ್ನು ಎಲ್ಲರೂ ಬೆಂಬಲಿಸಬೇಕು ಎಂದರು. ಈಗ ಮುಖ್ಯಮಂತ್ರಿ ಬದಲಾವಣೆಗೆ ಇನ್ನು ಸಮಯ ನಿಗದಿಯಾಗಿಲ್ಲ. ಮಾಧ್ಯಮದವರು ಪದೇ ಪದೇ ಮುಖ್ಯಮಂತ್ರಿ ಬದಲಾಗುತ್ತಾರೆ ಎಂಬ ಪ್ರಶ್ನೆ ಕೇಳಿದರೆ ನಾನು ಉತ್ತರ ಕೊಡಲು ಆಗಲ್ಲ. ಸುಮ್ಮನೆ ಊಹಾಪೋಹ ಪ್ರಶ್ನೆಗಳು ಬೇಡ ಎಂದರು.

ನಿನ್ನೆ ಸಹಾ ಎಐಸಿಸಿ ಅಧ್ಯಕ್ಷರು ಮುಖ್ಯಮಂತ್ರಿ ಬದಲಾವಣೆಗೆ ಇನ್ನು ಕಾಲ ಬಂದಿಲ್ಲ ಎಂದು ಹೇಳುವ ಮೂಲಕ ಮೇ ಎರಡನೇ ವಾರದಲ್ಲಿ ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಆಗುತ್ತೇವೆ ಎಂಬ ವರದಿಗಳನ್ನು ತಳ್ಳಿಹಾಕಿದರು. ಇಂದು ಸಹಾ ನಾಯಕತ್ವ ಬದಲಾವಣೆ ಬಗ್ಗೆ ಖರ್ಗೆಯವರು ಅಡ್ಡಗೋಡೆ ಮೇಲೆ ದೀಪ ಇಟ್ಟಂತೆ ಮಾತನಾಡಿರುವುದು ರಾಜಕೀಯವಾಗಿ ಮಹತ್ವ ಪಡೆದುಕೊಂಡಿದೆ.

## ಅಲ್ಪಸಂಖ್ಯಾತ ಕಾಲೊನಿಗಳ ಅಭಿವೃದ್ಧಿಗೆ 600 ಕೋಟಿ ರೂ. ಅನುಮೋದನೆ: ಸಚಿವ ಸಂಪುಟ ತೀರ್ಮಾನ

ಬೆಂಗಳೂರು: ರಾಜ್ಯ ಸಚಿವ ಸಂಪುಟವು ನಿನ್ನೆ ಗುರುವಾರ 2026–27 ಮತ್ತು 2027–28 ಹಣಕಾಸು ವರ್ಷಗಳಿಗೆ ಅಲ್ಪಸಂಖ್ಯಾತರು ವಾಸಿಸುವ ಕಾಲೊನಿಗಳ ಅಭಿವೃದ್ಧಿಗೆ 600 ಕೋಟಿ ರೂಪಾಯಿ ಮೊತ್ತದ ಕಾರ್ಯಯೋಜನೆಗೆ ಅನುಮೋದನೆ ನೀಡಿದ್ದು, ಅದರ ಅನುಷ್ಠಾನಕ್ಕೂ ಹಸಿರು ನಿಶಾನೆ ತೋರಿದೆ.

ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆಯಡಿ ರಾಜ್ಯದ 11 ನಗರ ಪಾಲಿಕೆಗಳ ವ್ಯಾಪ್ತಿಯಲ್ಲಿರುವ ಅಲ್ಪಸಂಖ್ಯಾತರ ಅತಿಹಿಂದುಳಿದ ಕಾಲೊನಿಗಳು, ಸ್ಲಂ ಪ್ರದೇಶಗಳನ್ನು ಸೇರಿಸಿ, ಮುಖ್ಯಮಂತ್ರಿ ವಿಶೇಷ ಅಭಿವೃದ್ಧಿ ಪ್ಯಾಕೇಜ್ ಅಡಿಯಲ್ಲಿ ಅಭಿವೃದ್ಧಿಪಡಿಸಲಾಗುತ್ತದೆ. ಸಂಬಂಧಿತ ಸಚಿವರ ಪ್ರಸ್ತಾವನೆಯನ್ನು ಹಣಕಾಸು ಇಲಾಖೆ ಅನುಮೋದಿಸಿದ್ದು, ಅದಕ್ಕೆ ಸಚಿವ ಸಂಪುಟವು ಸಹ ಒಪ್ಪಿಗೆ ನೀಡಿದೆ.

ಒಂದೇ ಬಾರಿಗೆ ಎರಡು ಹಣಕಾಸು ವರ್ಷಗಳಿಗೆ ಅನುಮೋದನೆ ನೀಡಿದ ಬಗ್ಗೆ ಕೇಳಿದ ಪ್ರಶ್ನೆಗೆ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಹೆಚ್.ಕೆ. ಪಾಟೀಲ್, ಹಿಂದಿನ ವರ್ಷಗಳಲ್ಲಿ ಪೂರ್ಣಗೊಳ್ಳದ ಕೆಲಸಗಳು ಸ್ವಾಭಾವಿಕವಾಗಿ ಮುಂದಿನ ಹಣಕಾಸು ವರ್ಷಕ್ಕೆ ವರ್ಗಾವಣೆಯಾಗುತ್ತದೆ ಎಂದು ಸ್ಪಷ್ಟಪಡಿಸಿದರು.

600 ಕೋಟಿ ರೂಪಾಯಿ ಮೊತ್ತದ ಎಲ್ಲ ಪ್ರಸ್ತಾವನೆಗಳು ಬಂದಿರುವುದರಿಂದ ನಾವು ಕಾರ್ಯಯೋಜನೆಗೆ ಅನುಮೋದನೆ ನೀಡಿದ್ದೇವೆ. ದಾವಣಗೆರೆ ದಕ್ಷಿಣ ಚುನಾವಣೆಯ ನಂತರ ಕೇವಲ ರಾತ್ರಿ ಬೆಳಗಾಗುವುದರೊಳಗೆ ತಕ್ಷಣ ಕಾರ್ಯಯೋಜನೆ ತಯಾರಿಸಲು ಸಾಧ್ಯವೇ ಎಂದು ಸಚಿವ ಹೆಚ್ ಕೆ ಪಾಟೀಲ್ ಇದು ಮುಸ್ಲಿಮರನ್ನು ತೃಪ್ತಿಪಡಿಸಲು ತೆಗೆದುಕೊಂಡ ಕ್ರಮವೇ ಎಂದು ಕೇಳಲಾದ ಪ್ರಶ್ನೆಗೆ ಅವರು ಪ್ರತಿಕ್ರಿಯಿಸಿದರು.

ಕಾರ್ಯಯೋಜನೆ ರೂಪಿಸುವ ಪ್ರಕ್ರಿಯೆ ಆರಂಭದಿಂದಲೇ ನಡೆದಿದ್ದು, ಅಂತಿಮವಾಗಿ ಅದು ಸಚಿವ ಸಂಪುಟದ ಅನುಮೋದನೆಗೆ ಬಂದಿದೆಯೆಂದು ಅವರು ಹೇಳಿದರು.

ಧರ್ಮಸ್ಥಳದ ಸೌಜನ್ಯ ಹತ್ಯೆ ಪ್ರಕರಣವನ್ನು ಮರು ತನಿಖೆ ನಡೆಸುವ ಕುರಿತು ಸುಪ್ರೀಂ ಕೋರ್ಟ್ ರಾಜ್ಯ ಸರ್ಕಾರಕ್ಕೆ ವರದಿ ಸಲ್ಲಿಸಲು ಸೂಚಿಸಿರುವ ಬಗ್ಗೆ ಕೇಳಿದ ಪ್ರಶ್ನೆಗೆ, ಸುಪ್ರೀಂ ಕೋರ್ಟ್ ಕೇಳಿದರೆ ನಾವು ವರದಿ ಸಲ್ಲಿಸುತ್ತೇವೆ ಎಂದು ಸಚಿವರು ಉತ್ತರಿಸಿದರು.



### ಹೊಸ ಆಂತರಿಕ ಅಥವಾ ಒಳ ಮೀಸಲು ಆದೇಶ ಶೀಘ್ರದಲ್ಲೇ

ನಿನ್ನೆ ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ, ಏಪ್ರಿಲ್ 27ರಂದು ಹೊರಡಿಸಿದ್ದ ಪರಿಶಿಷ್ಟ ಜಾತಿಗಳ (SC) ಒಳಮೀಸಲು ಆದೇಶವನ್ನು ಹಿಂಪಡೆದು, ನೇಮಕಾತಿ ಮತ್ತು ಶಿಕ್ಷಣದಲ್ಲಿ ರೋಸ್ಟರ್ ಕುರಿತು ಕೆಲವು ತಿದ್ದುಪಡಿ ಸಹಿತ ಹೊಸ ಆದೇಶ ಹೊರಡಿಸಲು ತೀರ್ಮಾನಿಸಲಾಯಿತು. ಒಳ ಮೀಸಲಾತಿಯನ್ನು ಅಳವಡಿಸದೆ ಹೊರಡಿಸಿದ ಎಲ್ಲಾ ಅಧಿಸೂಚನೆಗಳನ್ನು ಹಿಂಪಡೆಯಲಾಗುವುದು.

ರೋಸ್ಟರ್ ಪಾಯಿಂಟ್‌ಗಳನ್ನು 400ಕ್ಕೆ ನಿಗದಿಪಡಿಸಲಾಗುವುದು. ಎ ವರ್ಗ (ಖಅ–ಎಡ), ಬಿ ವರ್ಗ (ಖಅ–ಬಲ) ಮತ್ತು ಸಿ ವರ್ಗ (ಭೋವಿ, ಲಂಬಾಣಿ, ಕೊರಚ, ಕೊರಮ ಮತ್ತು ಇತರ 59 ಜಂಗಮ ಜಾತಿಗಳು) ಎಂದು ವಿಭಾಗಿಸಲಾಗುತ್ತದೆ ಎಂದು ಹೆಚ್.ಕೆ. ಪಾಟೀಲ್ ತಿಳಿಸಿದ್ದಾರೆ. ಸಿ ವರ್ಗಕ್ಕೆ 20 ಶೇಕಡಾ ಮೀಸಲು ನೀಡಲಾಗುತ್ತದೆ. ಈ ಜಾತಿಗಳಿಂದ ಅರ್ಹ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದರೆ, ಇತರರು ಆ ಹುದ್ದೆಗಳನ್ನು ಪಡೆಯಬಹುದು.

ನೇಮಕಾತಿಯಲ್ಲಿ ಮೂರು ಹುದ್ದೆಗಳಿಗಿಂತ ಕಡಿಮೆ ಇದ್ದರೆ, ಮೂರು ವರ್ಗಗಳೂ ಎಸ್‌ಸಿ ಸಾಮಾನ್ಯ ವರ್ಗದಡಿ ಸ್ಪರ್ಧಿಸಬೇಕು. ಸಚಿವ ಡಿ. ಸುಧಾಕರ್ ಅವರ ಆರೋಗ್ಯದ ಕುರಿತು ಹರಿದಾಡುತ್ತಿರುವ ವದಂತಿಗಳ ಬಗ್ಗೆ ಕೂಡ ಸಚಿವ ಸಂಪುಟ ಚರ್ಚೆ ನಡೆಸಿದ್ದು, ಅವರ ಆರೋಗ್ಯದ ಕುರಿತು ಪ್ರಕಟಣೆ ನೀಡುವುದನ್ನು ಕುಟುಂಬದ ನಿರ್ಧಾರಕ್ಕೆ ಬಿಟ್ಟಿದೆ ಎಂದು ಮೂಲಗಳು ತಿಳಿಸಿವೆ.

## "ದೇಶದ ಅಭಿವೃದ್ಧಿಯಲ್ಲಿ ಕಾರ್ಮಿಕರ ಪಾತ್ರ ಅನನ್ಯವಾದುದು"



ಅಥಣಿ : "ದೇಶದ ಅಭಿವೃದ್ಧಿಯಲ್ಲಿ ಕಾರ್ಮಿಕರ ಪಾತ್ರ ಅನನ್ಯವಾದುದು. ಶ್ರಮಿಕ ವರ್ಗದ ಕಲ್ಯಾಣಕ್ಕಾಗಿ ಮತ್ತು ಅವರ ಹಿತರಕ್ಷಣೆಗಾಗಿ ಸರ್ಕಾರವು ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದು, ಅದರ ಸದುಪಯೋಗವನ್ನು ಪ್ರತಿಯೊಬ್ಬ ಕಾರ್ಮಿಕರು ಪಡೆದುಕೊಳ್ಳಬೇಕು" ಎಂದು ಅಥಣಿ ಶಾಸಕ ಲಕ್ಷ್ಮಣ ಸವದಿ ಅವರು ಹೇಳಿದರು.

ಪಟ್ಟಣದ ಶಿವಯೋಗಿ ವೃತ್ತದಲ್ಲಿ ಮೇ 1ರಂದು ವಿಶ್ವ ಕಾರ್ಮಿಕ ದಿನಾಚರಣೆಯ ಅಂಗವಾಗಿ ತಾಲೂಕು ಕಾರ್ಮಿಕ ಇಲಾಖೆ ಹಾಗೂ ಅಥಣಿ ತಾಲೂಕಾ ಅಸಂಘಟಿತ ಕಟ್ಟಡ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ಆಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾರ್ಮಿಕರ ದಿನಾಚರಣೆ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡುತ್ತಿದ್ದರು.

ಸಮಾಜದ ಬೆನ್ನೆಲುಬಾಗಿರುವ ಕಾರ್ಮಿಕರು ಗೌರವಯುತ ಜೀವನ ನಡೆಸಲು ಪೂರಕವಾದ ವಾತಾವರಣ ನಿರ್ಮಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಮೇ ಒಂದರಂದು ಪ್ರತಿವರ್ಷ ಕಾರ್ಮಿಕರ ಬದುಕಿನ ಬಗ್ಗೆ ಅವಲೋಕನ ಮಾಡುವುದರ ಜೊತೆಗೆ ಅವರ ಬದುಕಿನ ಕಷ್ಟ ಪರಿಹಾರ ಮಾಡಲು ಅವಶ್ಯಕ ಕ್ರಮ ಕೈಗೊಳ್ಳಲು ಪೂರಕವಾಗಿದೆ. ಹಾಗೆಯೇ ಕಾರ್ಮಿಕರ ಬದುಕಿನಲ್ಲಿ ಚೈತನ್ಯ, ನೀಡುವುದಾಗಿದೆ. ಇಲಾಖೆ ಕಾರ್ಮಿಕರ ಬದುಕಿಗೆ ಆಧಾರ್ ಸ್ಥಂಭವಾಗಿ ಅವರ ಬದುಕಿಗೆ ಬೆಳಕು ತರುವುದಾಗಿದೆ. ಕಾರ್ಮಿಕ ಸಚಿವರಾದ ಸಂತೋಷ ಲಾಡ ಅವರು ಕಾರ್ಮಿಕ ಖಾತೆಯ ಮಂತ್ರಿಗಳಾಗಿ ತುಂಬಾ ಉತ್ತಮ ಕಾರ್ಯ ನಿರ್ವಹಣೆ ಮಾಡಿದ್ದಾರೆ.ಲಾಡ್ ಅವರು ಕಾರ್ಮಿಕರ ಬದುಕಿಗೆ ಬೆಳಕು ನೀಡಿದ ವ್ಯಕ್ತಿ ಎಂದು ಶ್ಲಾಘಿಸಿದರು. ಜೊತೆಗೆ ಕಾರ್ಮಿಕರು ಕಾಯಕದಲ್ಲಿ ಸಂತೋಷ ಕಂಡವರು. ಜನತೆ ಇಂದು ಪ್ರತಿಯೊಬ್ಬ ಸುಖವಾಗಿ ಇರಬೇಕಾದರೆ ಅದರ ಹಿಂದೆ ಕಾರ್ಮಿಕರ ಶ್ರಮ ತುಂಬಾ ಇದೆ. ಕಾರ್ಮಿಕರ ಮಕ್ಕಳು ಉತ್ತಮ ಶಿಕ್ಷಣ ಪಡೆದು ಅವರು ಕಾರ್ಮಿ ಕರಾಗಿ ಮುಂದುವರಿಯದಂತೆ ಅವರನ್ನು ಸಮಾಜದ ಮುಖ್ಯ ವಾಹಿನಿಗೆ ತರುವ ಕಾರ್ಯ ನಮ್ಮ ಸರಕಾರ ಮಾಡುತ್ತಿದೆ. ಹೀಗಾಗಿ ಕಾರ್ಮಿಕರ ಮಕ್ಕಳಿಗೆ 36 ಕೋಟಿ ವೆಚ್ಚದಲ್ಲಿ ವಸತಿ ಶಾಲೆ ನಿರ್ಮಾಣ ಮಾಡುತ್ತಿದ್ದೇವೆ. ನಾವು ಇದೆ ವರ್ಷ ತಮ್ಮ ಸಂಘಟನೆಗೆ ಒಂದು ಸ್ಥಳ ಹಾಗೂ ಶಾಸಕರ ನಿಧಿಯಿಂದ 10ಲಕ್ಷ ಅನುದಾನ ನೀಡಲಾ ಗುವುದು ಎಂದು ಶಾಸಕರು ತಿಳಿಸಿದರು.

**ಪ್ರತಿಭಾ ಪುರಸ್ಕಾರ:** ಇದೇ ಸಂದರ್ಭದಲ್ಲಿ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಸಾಧನೆಗಾಗಿ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.ಗುತ್ತಿಗೆದಾರ ರಾಜು ಅಲಬಾಳ ಪ್ರತಿಭಾವಂತ ಮಕ್ಕಳಿಗೆ ಸೈಕಲ್ ನೀಡಿ ಪ್ರೋತ್ಸಾಹ ನೀಡಿದರು.

ಇನ್ನೂ ಕಾರ್ಮಿಕ ಇಲಾಖೆಯ ಕಾರ್ಮಿಕ ನಿರೀಕ್ಷಕರಾದ ಭುವನೇಶ್ವರಿ ಢಾಲೆ ಮಾತನಾಡಿ ಕಾರ್ಮಿಕ ದಿನಾಚರಣೆ ಹಿನ್ನೆಲೆ ಹಾಗೂ ಮಹತ್ವ ವಿವರಿಸಿ ಮೊದಲುಕಾರ್ಮಿಕರು 14 ಗಂಟೆ ದುಡಿಯಬೇಕಾಗಿತ್ತು ಅದನ್ನು ಎಂಟು ಗಂಟೆಗೆ ಇಳಿಸಲಾಯಿತು.ಮಹಿಳಾ ಹೆರಿಗೆ ರಜೆ ಜೊತೆಗೆ ಸರಕಾರ ಕೂಡಾ ಹಲವಾರು ಯೋಜನೆ ಜಾರಿಗೆ ತಂದಿದೆ. ಶೈಕ್ಷಣಿಕವಾಗಿ ಕಾರ್ಮಿಕರ ಮಕ್ಕಳಿಗೆ ಸ್ಕಾಲರ ಶೀಪ ಸೇರಿದಂತೆ ಅಫಘಾತ ವಿಮೆ, ಆರೋ ಗ್ಯ ವಿಮೆ,ಮುಪ್ಪಿನಲ್ಲಿ ವೃದ್ಯಾಪ ವೇತನ ಸೇರಿದಂತೆ ಹಲವಾರು ಯೋ ಜನೆಗಳ ಲಾಭ ಪಡೆಯಬೇಕು ಎಂದು ಅಧಿಕಾರಿ ಢಾಲೆ ಅವರು ಇಲಾಖೆಯಿಂದ ಸಿಗುವ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ದಿವ್ಯ ಸಾನಿಧ್ಯ ವಹಿಸಿದ್ದ ಶೆಟ್ಟರ್ ಮಠದ ಶ್ರೀ ಮರುಳಸಿದ್ಧ ಮಹಾಸ್ವಾಮಿಗಳು ಕಾರ್ಯಕ್ರಮದ ಸಾನಿಧ್ಯ ವಹಿಸಿ ಆಶೀರ್ವಚನ ನೀಡುತ್ತಾ, ಶ್ರಮಜೀವಿಗಳ ಬದುಕು ಹಸನಾಗಲಿ ಎಂದು ಹಾರೈಸಿದರು.

ವೇಳೆ ಅಥಣಿ ನಗರಸಭೆ ಉಪಾಧ್ಯಕ್ಷರಾದ ಭುವನೇಶ್ವರಿ ಯಕ್ಕಂಚಿ ಮಾತನಾಡಿದರು. ಗುತ್ತಿಗೆದಾರ ರಾಜು ಅಲಬಾಳ, ಅಥಣಿ ತಾಲೂಕಾ ಅಸಂಘಟಿತ ಕಟ್ಟಡ ಕಾರ್ಮಿಕರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷರಾದ ಸುರೇಶ್ ನಿಕ್ಕಂ, ಉಪಾಧ್ಯಕ್ಷ ಕೇದಾರಿ ಹಳದಮಳ, ಚಂದ್ರಶೇಖರ ಐಗಳಿ, ಸುರೇಶ ಮೊಪಗಾರ, ತಾಲೂಕು ಕಾರ್ಮಿಕ ಇಲಾಖೆಯ ಅಧಿಕಾರಿ ಭುವನೇಶ್ವರಿ ಢಾಲೆ, ಹಾಗೂ ತಾಲೂಕು ಕಾರ್ಮಿಕ ಸಂಘದ ಪದಾಧಿಕಾರಿಗಳು ಮತ್ತು ಕಾರ್ಮಿಕ ಬಂಧುಗಳು ಉಪಸ್ಥಿತರಿದ್ದರು.

## ಕಾರ್ಮಿಕರ ದಿನಾಚರಣೆ; ಗೌರವ ಸನ್ಮಾನ ಕಾರ್ಯಕ್ರಮ



ಹುಬ್ಬಳ್ಳಿ: ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಕಾರ್ಮಿಕರ ದಿನಾಚರಣೆ ಅಂಗವಾಗಿ ಆಯೋಜಿಸಿದ್ದ ಸನ್ಮಾನ ಕಾರ್ಯಕ್ರಮದಲ್ಲಿ ಹೊನ್ನಪ್ಪ ತಾವರಗೇರಿ ರೋಟರಿ ಭವನದ ಕಾವಲುಗಾರನಾಗಿ ಸೇವೆ ಮಾಡುತ್ತಿರುವ ಮಂಜುನಾಥ್ ರಿತ್ತಿ ಅವರಿಗೆ ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ, ಬಸವ ಪರಿಸರ ಸಂರಕ್ಷಣಾ ಸಮಿತಿಯ ವತಿಯಿಂದ ಶಾಲು, ಮಾಲಾರ್ಪಣೆ ಮಾಡಿ ಆತ್ಮೀಯವಾಗಿ ಗೌರವದಿಂದ ಸನ್ಮಾನ ಮಾಡಿದರು. ಸೋಹನ ಸುರೇಶ ಹೊರಕೇರಿ, ರೋಟರಿ ಕ್ಲಬ್ ಹುಬ್ಬಳ್ಳಿ–ಉತ್ತರ ವಲಯದ ಅಧ್ಯಕ್ಷ ಗುರುಪಾದಯ್ಯ ಸಾಲಿಮಠ , ರೋಟರಿ ಕ್ಲಬ್ ಹುಬ್ಬಳ್ಳಿ ಟ್ರಸ್ಟನ ಮಾಜಿ ಅಧ್ಯಕ್ಷ ಪ್ರೊ ಮಹಾಂತೇಶ ಸಜ್ಜನ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಅಧ್ಯಕ್ಷ , ಸಾಹಿತಿ ಪ್ರೊ ಎಸ್ ಎಂ ಸಾತ್ಮಾರ್ , ಉಪಾಧ್ಯಕ್ಷ ಚನ್ನಬಸಪ್ಪ ಧಾರವಾಡಶೆಟ್ಟರ, ಶಾಂಭವಿ ಸಾಲಿಮಠ, ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ , ವಿನಯ್ ರಿತ್ತಿ , ಮುಂತಾದವರು ಇದ್ದರು. ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ ಅವರು ಮಾತನಾಡಿ ಕಾರ್ಮಿಕರು ಯಾವ ಕ್ಷೇತ್ರದಲ್ಲಿ ಕಾಯಕ ನಿರ್ವಹಿಸುತ್ತಿದ್ದಾರೋ ಅಲ್ಲಿ ನಿಷ್ಠೆ, ಪ್ರಾಮಾಣಿಕತೆ, ಶ್ರದ್ಧೆಯಿಂದ ಆತ್ಮ ಸಂತೃಪ್ತಿಯೊಂದಿಗೆ ಕಾಯಕ ಮಾಡಿ ಸಂಸ್ಥೆಯ, ಮಾಲಿಕರ ಮನಸ್ಸನ್ನು ಗೆಲ್ಲಬೇಕು. ವಿಶ್ವಗುರು ಬಸವಣ್ಣನವರು ಎಲ್ಲ ಕಾಯಕಗಳಿಗೆ ಮಹತ್ವ ನೀಡಿ, ಕಾಯಕಜೀವಿಗಳಿಗೆ ಗೌರವ ತಂದುಕೊಟ್ಟಿದ್ದಾರೆ ಎಂದರು. ಎಲ್ಲ ಕಾರ್ಮಿಕರಿಗೂ ಸುರಕ್ಷತೆ ಹಾಗೂ ಹವಾಮಾನ ವೈಪರಿತ್ಯಕ್ಕೆ ತಕ್ಕಂತೆ ಉತ್ತಮ ಆರೋಗ್ಯ ಸೇವೆ ಸಿಗುವಂತಾಗಬೇಕು. ಖಾಸಗಿ ಕ್ಷೇತ್ರಗಳಲ್ಲಿ ಕಾಯಕ ಮಾಡುತ್ತಿರುವ ಕಾರ್ಮಿಕರಿಗೆ ಕನಿಷ್ಟ ವೇತನ ಹಾಗೂ ಸಕಲ ಸೌಲಭ್ಯಗಳು ದೊರಕಬೇಕು. ಎಂಟು ಗಂಟೆ ಕೆಲಸ ಕಾರ್ಯರೂಪಕ್ಕೆ ಬರಬೇಕು. ಕಾರ್ಮಿಕರ ದಿನಾಚರಣೆ ಮಹತ್ವವನ್ನು ತಿಳಿಸಿಕೊಟ್ಟರು. ದುಡಿಯುವ ವರ್ಗಕ್ಕೆ, ಎಲ್ಲ ಉದ್ಯೋಗಗಳಿಗೆ ಅಪಾರ ಗೌರವ ಸಿಗುವ ಹಾಗೆ ಮಾಡಿದ್ದು 12ನೇ ಶತಮಾನದಲ್ಲಿ ಕರ್ನಾಟಕದ ಸಾಂಸ್ಕೃತಿಕ ನಾಯಕ, ವಿಶ್ವಗುರು ಬಸವಣ್ಣನವರು. ಎಲ್ಲ ವರ್ಗದ ಶರಣರನ್ನು ಅನುಭವ ಮಂಟಪದಲ್ಲಿ ಸೇರಿಸಿಕೊಂಡು ವಚನಗಳನ್ನು ರಚನೆ ಮಾಡಿ, ಶ್ರೇಷ್ಠ ಅನುಭಾವಿಗಳನ್ನಾಗಿ ಪರಿವರ್ತನೆ ಮಾಡಿದವರು ವಿಶ್ವಗುರು ಬಸವಣ್ಣನವರು. ಕಾಯಕ ಜೀವಿಗಳು ವಿಶ್ವಗುರು ಬಸವಣ್ಣನವರು ಹಾಗೂ ಬಸವಾದಿ ಶರಣರ ವಚನಗಳನ್ನು ಓದಬೇಕು ಮತ್ತು ವಚನಗಳಲ್ಲಿರುವ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಜೀವನವನ್ನು ಸಾರ್ಥಕಪಡಿಸಿಕೊಳ್ಳಬೇಕು ಎಂದರು.

## ಗ್ರಾಮ ದೇವತೆ ಉಡಿತುಂಬುವ ಕಾರ್ಯಕ್ರಮದಲ್ಲಿ ಶಕ್ತಿಪ್ರದರ್ಶನ

ಉಗರಗೋಳ: ಸವದತ್ತಿ ತಾಲೂಕಿನ ಉಗರಗೋಳ ಗ್ರಾಮದಲ್ಲಿ ಶುಕ್ರವಾರ ರಂದು ಕಾರಹುಣ್ಣಿಮೆ ಅಂಗವಾಗಿ ಗ್ರಾಮ ದೇವತೆಯಾದ ಧ್ಯಾಮವ್ವ ದುರ್ಗವ್ವ ದೇವಿಯರ ಉಡಿ ತುಂಬುವ ಕಾರ್ಯಕ್ರಮದ ಪ್ರಯುಕ್ತ ಶಕ್ತಿಪ್ರದರ್ಶನ ಉಗರಗೋಳ ಗ್ರಾಮದ ಯುವಕರಿಂದ ಜರುಗಿತು.

20 ವರ್ಷದ ಕುಮಾರ–ಪ್ರವೀಣ ದುಂಡಿ(ಗೋಸಲ್) 20 ವರ್ಷದ ಕುಮಾರ–ವಿಜಯ ಪಡಸುಣಗಿ, 20 ವರ್ಷದ ಕುಮಾರ–ಕಾರ್ತಿಕ ಕುದರಿ ಹಾಗೂ ಎರಡು ಜೋಡು ಎತ್ತುಗಳು ಸಹ ಇವರೊಂದಿಗೆ ಸಾತ ನೀಡಿದವು.

1 ಕ್ವಿಂಟಲ್ ತೂಕದ ಜೋಳದ ಚೀಲವನ್ನು ಹೊತ್ತು ಯಾರ ಸಹಾಯವಿಲ್ಲದೆಯೇ ದಿಡ ನಮಸ್ಕಾರವನ್ನು ಹಾಕುವ ಜೊತೆಗೆ ಎತ್ತುಗಳು ಸಹ ಅವರು ಹಾಕಿದ ಹಾಗೆ ದೀಡ ನಮಸ್ಕಾರಗಳನ್ನು ಹಾಕಿದವು.

ಉಗರಗೋಳದ ರಾಯಣ್ಣ ಸರ್ಕಲ್‌ನಿಂದ ಶ್ರೀಬಸವೇಶ್ವರ ಸರ್ಕಲ್ ವರೆಗೆ ಸುಮಾರು ಅರ್ದ ಕಿ ಮೀ ವರೆಗೆ ಸಾಗಿ ಜಾತ್ರೆಗೆ ಮೆರಗು ತಂದು, ನೋಡುಗರನ್ನು ಹುಬ್ಬೆರಿಸುವಂತೆ ಮಾಡಿದರು.

ಉಗರಗೋಳ ನಿರ್ವಾಣೇಶ್ವರಮಠದ ಗುರು ಮಹಾಂತ ಸ್ವಾಮಿಗಳು, ಹಿರೇಕುಂಬಿ ಅಮೋಘಿಮಠದ ಪ.ಪೂ ಮುನಯ್ಯಾ ಸ್ವಾಮಿಗಳು, ಮಲ್ಲಪ್ಪ ಶಿದ್ದಕ್ಕನವರ, ವಿಠಲ ಶಿದ್ದಕ್ಕನವರ, ಹನಮಂತ ಶಿದ್ದಕ್ಕನವರ, ಮಂಜುನಾಥ ಗುಡೆನ್ನವರ, ಯಲ್ಲಪ್ಪ ದುಂಡಿ, ಮಾರುತಿ ಪಡಸುಣಗಿ, ಬಸಪ್ಪ ಅಳಗವಾಡಿ, ರಾಜನಗೌಡ ಟೊಪಣ್ಣವರ, ನಿಲಪ್ಪ ಶಿದ್ದಕ್ಕನವರ, ಭಿಮಶಿ ಕೊಮಟೊಜಿ, ನಿಂಗಪ್ಪ ಗೋವಪ್ಪನವರ ಹಾಗೂ ಗ್ರಾಮಸ್ಥರು ಇದ್ದರು.



# ಲಿಂಗ ತಾರತಮ್ಯ ಹಾಗೂ ವರದಕ್ಷಿಣೆ ಮುಕ್ತ ಸಮಾಜ ನಿರ್ಮಾಣಕ್ಕೆ ಕರೆ: ಸಿ.ಎಸ್.ಶಿವನಗೌಡರ



ಗದಗ : (POSH) act ಉದ್ದೇಶ ಕೆಲಸದ ಸ್ಥಳಗಳಲ್ಲಿ ಮಹಿಳೆಯರ ಮೇಲಾಗುವ ದೌರ್ಜನ್ಯ ತಡೆ ಹಾಗೂ ವರದಕ್ಷಿಣೆ ಪದ್ಧತಿಯ ನಿರ್ಮೂಲನೆಯ ಕುರಿತು ಜಾಗೃತಿ ಮೂಡಿಸುವ ವಿಶೇಷ ಕಾರ್ಯಕ್ರಮದಲ್ಲಿ ಕಚೇರಿಗಳಲ್ಲಿ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ನಡುವೆ ಸೌಹಾರ್ದಯುತ ವಾತಾವರಣ ಇರಬೇಕು, ಲಿಂಗ ತಾರತಮ್ಯ ಹಾಗೂ ವರದಕ್ಷಿಣೆ ಮುಕ್ತ ಸಮಾಜ ನಿರ್ಮಾಣ ಆಗಲಿಕೆ ನಾವೆಲ್ಲರೂ ಕೈ ಜೋಡಿಸಬೇಕೆಂದು ಅಂದಾಗ ಮಾತ್ರ ವರದಕ್ಷಿಣೆ ಮುಕ್ತ ಸಮಾಜ ಆಗಲಿಕೆ ಸಾಧ್ಯ ಎಂದು ಗೌರವಾನ್ವಿತ ದಿವಾನಿ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳು ಸಿ ಎಸ್. ಶಿವನಗೌಡರ ತಿಳಿಸಿದರು.

ನಗರದ ಜಿಲ್ಲಾ ಪಂಚಾಯತ್ ಸಭಾ ಭವನದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್,ಜಿಲ್ಲಾ ಕಾನೂನು ಸೇವೆಗಳ ಪ್ರಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರುಗಳ ಸಹಯೋಗದಲ್ಲಿ ಜರುಗಿದ ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ(ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ)ಅಧಿನಿಯಮ 2013ರ ಕಾಯ್ದೆ" ಅನುಷ್ಠಾನಕ್ಕೆ ಸಂಬಂಧಿಸಿದಂತೆ ಹಾಗೂ ವರದಕ್ಷಿಣೆ ನಿಷೇಧ ಕಾಯ್ದೆ 1961, ಹಾಗೂ ವಧು-ವರದಕ್ಷಿಣೆ ನಿಷೇಧ ತಡೆಗಟ್ಟುವ ಕರ್ನಾಟಕ ನಿಯಮಗಳು 2004ರ ಹಿನ್ನೆಲೆಯಲ್ಲಿ ವರದಕ್ಷಿಣೆ ಪದ್ಧತಿಯನ್ನು ತಡೆಗಟ್ಟುವ ಕುರಿತು ಒಂದು ದಿನದ ತರಬೇತಿ ಕಾರ್ಯಗಾರ ಉದ್ಘಾಟಿಸಿ ಮಾತನಾಡಿದರು.

ಕೆಲಸದ ಸ್ಥಳದಲ್ಲಿ ಮಹಿಳೆಯರು ಜಾಗೃತರಾಗಿರಬೇಕು ಕಚೇರಿಯ ಸಿಬ್ಬಂದಿಗಳು ಮಹಿಳೆಯರ ಜೊತೆ ಮನೋಭಾವನೆಯಿಂದ ಇರಬೇಕು ಕೆಲಸ ಮಾಡುವ ಸ್ಥಳಗಳಲ್ಲಿ ಮಹಿಳೆಯರಿಗೆ ಬಡ್ತಿ ಅಥವಾ ಇತರ ಆಮಿಷಗಳನ್ನು ಒಡ್ಡಿ ಅವರನ್ನು ದುರುಪಯೋಗ ಪಡಿಸಿಕೊಳ್ಳುವುದು ಕಾನೂನಿನ ಅಡಿಯಲ್ಲಿ ಗಂಭೀರ ಅಪರಾಧ ಎಂದು ಎಚ್ಚರಿಸಿದರು ಯಾವುದೇ ತಪ್ಪು ಮಾಡದಿದ್ದಲ್ಲಿ ಮಹಿಳೆಯರು ಭಯಪಡುವ ಅಗತ್ಯವಿಲ್ಲ ಎಂದು ಅವರು ಧೈರ್ಯ ತುಂಬಿದರು.

ತಾಲೂಕು ಮಟ್ಟ ಮತ್ತು ಗ್ರಾಮ ಮಟ್ಟದ ಕಚೇರಿಗಳಲ್ಲಿ ಒಬ್ಬ ನೂಡಲ್ ಅಧಿಕಾರಿಯನ್ನು ನೇಮಿಸಬೇಕು, ಕೇವಲ ದ್ವೇಷ ಅಥವಾ ವೈಯಕ್ತಿಕ ಕಾರಣಗಳಿಗಾಗಿ ಅಧಿಕಾರಿಗಳ ಮೇಲೆ ಸುಳ್ಳು ದೂರು ನೀಡುವುದು ಸರಿಯಲ್ಲ ಸುಳ್ಳು ದೂರು ನೀಡುವುದು ಸಾಬೀತಾದಲ್ಲಿ ದೂರುದಾರರ ಮೇಲೆಯೂ ಕಾನೂನು ಕ್ರಮ ಕೈಗೊಳ್ಳಲು ಅವಕಾಶವಿದೆ ಎಂದು ಸ್ಪಷ್ಟಪಡಿಸಿದರು.

ಕಚೇರಿಯಲ್ಲಿ ಮಹಿಳೆಯರ ಮೇಲೆ ಅಧಿಕಾರಿಗಳು ಕೆಲಸ ಕೊಡಿಸುವ ನಿಟ್ಟಿನಲ್ಲಿ ಅಸಭ್ಯ ವರ್ತನೆಯಿಂದ ನಡೆದುಕೊಳ್ಳಬಾರದು ಕಚೇರಿಯ ಕೆಲಸಗಳು ಶಿಸ್ತಿನಿಂದ ನಡೆಯಲು ಹಿರಿಯ ಅಧಿಕಾರಿಗಳು ನೀಡುವ ಸೂಚನೆಗಳನ್ನು ದೌರ್ಜನ್ಯ ಎಂದು ತಪ್ಪಾಗಿ ಅರ್ಥೈಸಬಾರದು ಎಂದು ಅವರು ಕಿವಿಮಾತು ಹೇಳಿದರು.

ವರದಕ್ಷಿಣೆ ಎಂಬ ಸಾಮಾಜಿಕ ಪಿಡುಗನ್ನು ಹೋಗಲಾಡಿಸುವುದು ನಮ್ಮ ಕರ್ತವ್ಯವಾಗಿದೆ ವರದಕ್ಷಿಣೆ ನೀಡುವುದು ಮತ್ತು ಪಡೆಯುವುದು ಎರಡೂ ಅಪರಾಧ ಸಮಾಜದ ವಿವಿಧ ಹಂತಗಳಲ್ಲಿ ಇಂದಿಗೂ ಈ ಪದ್ಧತಿ ಜೀವಂತವಾಗಿದ್ದು, ಇದನ್ನು ಬೇರುಸಹಿತ ಕಿತ್ತೆಸೆಯಲು ಪ್ರತಿಯೊಬ್ಬರೂ ಕೈಜೋಡಿಸಬೇಕು, ಸಾರ್ವಜನಿಕ ಸಂಪರ್ಕದಲ್ಲಿರುವ ಇಲಾಖೆಯ ಸಿಬ್ಬಂದಿಗಳು ಜನಸಾಮಾನ್ಯರಲ್ಲಿ ಈ ಬಗ್ಗೆ ಹೆಚ್ಚಿನ ಅರಿವು ಮೂಡಿಸಬೇಕು ಎಂದು ಕರೆ ನೀಡಿದರು.

ಕಚೇರಿಗಳಲ್ಲಿ ಮಹಿಳೆಯರ ಗೌರವ ರಕ್ಷಣೆಗೆ ಮೊದಲ ಆದ್ಯತೆ ಅಧಿಕಾರಿಗಳು ಮತ್ತು ಸಿಬ್ಬಂದಿ ನಡುವೆ ಸಾಮರಸ್ಯದ ಅಗತ್ಯ ಸುಳ್ಳು ದೂರು ನೀಡುವವರ ವಿರುದ್ಧವೂ ಕಠಿಣ ಕ್ರಮದ ಎಚ್ಚರಿಕೆ ವರದಕ್ಷಿಣೆ ಮುಕ್ತ ಸಮಾಜ ನಿರ್ಮಾಣ ಆಗಲಿಕ್ಕೆ ಜಾಗೃತಿಯೇ ಮದ್ದು ಎಂದರು.

ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ. ಆರ್. ಮುಂಡರಗಿ ಮಾತನಾಡಿ ಸಮಾಜದಲ್ಲಿ ಹೆಣ್ಣು ಮಕ್ಕಳ ಮೇಲಾಗುತ್ತಿರುವ ಶೋಷಣೆ ಮತ್ತು ಲಿಂಗ ತಾರತಮ್ಯವನ್ನು ತಡೆಗಟ್ಟಲು ಜಿಲ್ಲಾ ಹಾಗೂ ಸ್ಥಳೀಯ ಮಟ್ಟದ ಸಮಿತಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾ ಪಂಚಾಯತ್ ಉಪಕಾ ರ್ಯದರ್ಶಿ ಸಿ.ಆರ್. ಮುಂಡರಗಿ ಹೇಳಿದರು.

**ಹದಿಹರೆಯದವರ ರಕ್ಷಣೆ ನಮ್ಮ ಮೊದಲ ಆದ್ಯತೆ**

ಇಂದಿನ ದಿನಗಳಲ್ಲಿ ಹದಿಹರೆಯದ ಹೆಣ್ಣು ಮತ್ತು ಗಂಡು ಮಕ್ಕಳ ಮೇಲೆ ನಡೆಯುತ್ತಿರುವ ದೌರ್ಜನ್ಯಗಳ ಬಗ್ಗೆ ಆತಂಕ ವ್ಯಕ್ತಪಡಿಸಿದ ಅವರು, "ಹದಿಹರೆಯದ ವಯಸ್ಸು ಬಹಳ ಸೂಕ್ಷ್ಮವಾದುದು. ಈ ಹಂತದಲ್ಲಿ ಮಕ್ಕಳು ದಾರಿ ತಪ್ಪದಂತೆ ಮತ್ತು ಶೋಷಣೆಗೆ ಒಳಗಾಗದಂತೆ ನೋಡಿಕೊಳ್ಳುವುದು ಪೋಷಕರು ಹಾಗೂ ಸಮಾಜದ ಜವಾಬ್ದಾರಿ" ಎಂದರು.

ಕಾನೂನುಗಳ ಬಗ್ಗೆ ಸಮಗ್ರ ಅರಿವು ಮೂಡಿಸುವ ಮೂಲಕ ಇಂತಹ ಘಟನೆಗಳನ್ನು ತಡೆಯಲು ಸಾಧ್ಯವಿದೆ ಎಂದು ಅವರು ಪ್ರತಿಪಾದಿಸಿದರು.

ಗ್ರಾಮೀಣ ಭಾಗದಲ್ಲಿ ವರದಕ್ಷಿಣೆ ಪಿಡುಗು ಮತ್ತು ವರದಕ್ಷಿಣೆ ಪದ್ಧತಿಯು ಇಂದಿಗೂ ಸಮಾಜಕ್ಕೆ ದೊಡ್ಡ ಪಿಡುಗಾಗಿ ಉಳಿದಿದೆ ಎಂದು ಬೇಸರ ವ್ಯಕ್ತಪಡಿಸಿದ ಅವರು, ವಿಶೇಷವಾಗಿ ಗ್ರಾಮೀಣ ಭಾಗಗಳಲ್ಲಿ ಇದರ ಪ್ರಭಾವ ಹೆಚ್ಚಿದೆ, ಈ ಪಿಡುಗನ್ನು ಹೋಗಲಾಡಿಸಲು ಕೇವಲ ಕಾನೂನು ಸಾಲದು, ಬದಲಾಗಿ ಜನರ ಆಲೋಚನಾ ಶೈಲಿಯಲ್ಲಿ ಬದಲಾವಣೆ ಬರಬೇಕು ಹಾಗೂ ಅಧಿಕಾರಿಗಳು ಈ ಬಗ್ಗೆ ಕಟ್ಟುನಿಟ್ಟಿನ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಸಲಹೆ ಸೂಚಿಸಿದರು.

ಜಿಲ್ಲೆಯಲ್ಲಿ ಲಿಂಗ ತಾರತಮ್ಯ ಮತ್ತು ದೌರ್ಜನ್ಯ ತಡೆಗೆ ಆಂತರಿಕ ಸಮಿತಿ (Internal Committee) ಹಾಗೂ ಸ್ಥಳೀಯ ಸಮಿತಿಗಳ (Local Committee) ಪಾತ್ರ ಬಹಳ ದೊಡ್ಡದಿದೆ ಜಿಲ್ಲೆಯಲ್ಲಿ ಒಟ್ಟು 839 ಸಮಿತಿಗಳನ್ನು ರಚಿಸುವ ಗುರಿ ಹೊಂದಲಾಗಿದೆ ಪ್ರಸ್ತುತ 731 ಸಮಿತಿಗಳು ಈಗಾಗಲೇ ಅಸ್ತಿತ್ವಕ್ಕೆ ಬಂದಿವೆ ಬಾಕಿ ಉಳಿದಿರುವ ಸಮಿತಿಗಳನ್ನು ಶೀಘ್ರದಲ್ಲೇ ರಚಿಸಿ, ಎಲ್ಲ ಸಮಿತಿಗಳು ಅತ್ಯಂತ ಸಕ್ರಿಯವಾಗಿ (ಒಭಿಣುತಜ) ಕೆಲಸ ಮಾಡುವಂತೆ ನೋಡಿಕೊಳ್ಳಲಾಗುವುದು ಎಂದು ಅವರು ಮಾಹಿತಿ ನೀಡಿದರು.

ಪ್ರಾರ್ಥನಾ ಗೀತೆಯನ್ನು ಸುವರ್ಣ ಪತ್ತಾರ ಪ್ರಸ್ತುತ ಪಡಿಸಿದರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ನಿರೂಪಣಾಧಿಕಾರಿಗಳು ಶ್ರೀಮತಿ ರಾಧಾ.ಜಿ. ಮಣ್ಣೂರು, ಪ್ರಾಸ್ತವಿಕವಾಗಿ ಮಾತನಾಡಿದರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿ ಶ್ರೀಮತಿ ಜಯಶ್ರೀ.ಆರ್. ಸರ್ವರನ್ನು ಸ್ವಾಗತಿಸಿದರು, ವಿಜಯಲಕ್ಷ್ಮಿ ಗುರುಬಸವನಗೌಡರ ಕಾರ್ಯಕ್ರಮವನ್ನು ನಿರೂಪಿಸಿ ಪ್ರಸ್ತಾವನೆ ಭೋದಿಸಿ ವಂದಿಸಿದರು.

ಈ ಕಾರ್ಯಕ್ರಮದಲ್ಲಿ ಡಿ.ವೈ.ಎಸ್.ಪಿ ಮಹಾಂತೇಶ ಸಜ್ಜನ, ಯುನಿಸೆಫ್ (UNICEF) ಮಕ್ಕಳ ಸಂರಕ್ಷಣಾ ಘಟಕದ ಪ್ರಾದೇಶಿಕ ಸಂಯೋಜಕರಾದ ಹರೀಶ್ ಜೋಗಿ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸಹಾಯಕ ಕಾನೂನು ನೆರವು ಅಭಿಕ್ಷಕರಾದ ಶ್ರೀಮತಿ ಮಂಜುಳಾ ಸ್ವಾಮಿ, ಜಿಲ್ಲಾ ಮತ್ತು ತಾಲೂಕು ಮಟ್ಟದ ಪೊಲೀಸ್ ಇಲಾಖೆಯ ಸಿಬ್ಬಂದಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಸಮಿತಿಯ ಸದಸ್ಯರು ಉಪಸ್ಥಿತರಿದ್ದರು.

# ವಿಜ್ಞಾನ ವಿಭಾಗದಲ್ಲಿ ಫಸ್ಟ್ ರ್ಯಾಂಕ್ ಪಡೆದ ಗದಗ ಸರಕಾರಿ ಪದವಿ ಪೂರ್ವ ಕಾಲೇಜು



ಗದಗ: ಸರ್ಕಾರಿ ಪದವಿ ಪೂರ್ವ ಕಾಲೇಜಿನ ವಿಜ್ಞಾನ ವಿಭಾಗದ ವಿದ್ಯಾರ್ಥಿನಿ ಸಮೃದ್ಧಿ ಸಿದ್ಲಿಂಗ ಅವರು ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಅಂಕಗಳನ್ನು ಪಡೆಯುವ ಮೂಲಕ ಕಾಲೇಜು ಮತ್ತು ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

ಸಮೃದ್ಧಿ ಸಿದ್ಲಿಂಗ ಅವರು ವಿಜ್ಞಾನ ವಿಭಾಗದಲ್ಲಿ 600ಕ್ಕೆ 595 ಅಂಕಗಳನ್ನು ಗಳಿಸಿ ಐತಿಹಾಸಿಕ ಸಾಧನೆ ಮಾಡಿದ್ದಾರೆ. ರಾಜ್ಯದ ಜನರಲ್ ರ್ಯಾಂಕಿಂಗ್ ನಲ್ಲಿ 5ನೇ ಸ್ಥಾನ, ಜಿಲ್ಲೆಗೆ ಫಸ್ಟ್ ರ್ಯಾಂಕ್, ಹಾಗೂ ರಾಜ್ಯದ ಸರಕಾರಿ ಕಾಲೇಜುಗಳ ವಿಜ್ಞಾನ ವಿಭಾಗದಲ್ಲಿ ಫಸ್ಟ್ ರ್ಯಾಂಕ್ ಪಡೆದು ಅತ್ಯುತ್ತಮ ಸಾಧನೆಗೈದಿದ್ದಾರೆ.

ಕಾಲೇಜು ಅಭಿವೃಧಿ ಸಮಿತಿಯ ಉಪಾಧ್ಯಕ್ಷರು ಹಾಗೂ ಮಾಜಿ ಜಿಲ್ಲಾ ಪಂಚಾಯತ್ ಅಧ್ಯಕ್ಷರಾದ ಸಿದ್ದಲಿಂಗೇಶ್ವರ ಎಚ್. ಪಾಟೀಲ ಅವರು ಮಾತನಾಡಿ ರಾಜ್ಯದ ಸರ್ಕಾರಿ ಕಾಲೇಜುಗಳಲ್ಲಿ ವಿಜ್ಞಾನ ವಿಭಾಗದಲ್ಲಿ ಅತಿ ಹೆಚ್ಚು ಅಂಕ ಪಡೆದ ಕೀರ್ತಿ ಸಮೃದ್ಧಿ ಸಿದ್ಲಿಂಗ ಅವರಿಗೆ ಸಲ್ಲುತ್ತದೆ. ಗದಗ ಸರಕಾರಿ ಪದವಿ ಪೂರ್ವ ಕಾಲೇಜು, ರಾಜ್ಯಕ್ಕೆ ಮಾದರಿಯಾಗಿದೆ ಎಂದು ಹರ್ಷವ್ಯಕ್ತಪಡಿಸಿದ್ದಾರೆ.

ಕಾನೂನು ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್. ಕೆ. ಪಾಟೀಲ ಅವರು, ಶಿಸ್ತು ಮತ್ತು ಕಠಿಣ ಪರಿಶ್ರಮದಿಂದ ಉನ್ನತ ಸಾಧನೆ ಸಾಧ್ಯ ಎಂದು ತೋರಿಸಿಕೊಟ್ಟ ಸಮೃದ್ಧಿ ಸಿದ್ಲಿಂಗ, ಅವರ ಪೋಷಕರಿಗೆ ಹಾಗೂ ಗುಣಮಟ್ಟದ ಶಿಕ್ಷಣ ನೀಡುತ್ತಿರುವ ಸರಕಾರಿ ಪದವಿ ಪೂರ್ವ ಕಾಲೇಜು ಗದಗನ ಎಲ್ಲಾ ಉಪನ್ಯಾಸಕರಿಗೆ, ಪ್ರಾಚಾರ್ಯರಿಗೆ, ಕಾಲೇಜು ಅಭಿವೃದ್ಧಿ ಸಮಿತಿಯ ಸರ್ವ ಸದಸ್ಯರಿಗೆ ಅಭಿನಂದಿಸಿದರು.

# ರೋಣ ತಾಲ್ಲೂಕಿನ PDO ಮಕ್ತುಮ ಹುಸೇನ ಆತ್ಮಹತ್ಯೆ

ಗದಗ: ಜಿಲ್ಲೆಯ ರೋಣ ತಾಲ್ಲೂಕಿನ ಅಸೂಟಿ ಮತ್ತು ಕೊತಬಾಳ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿ (ಪಿಡಿಒ) ಮಕ್ತುಮ ಹುಸೇನ ಕರಡಿಗುಡ್ಡ (46) ಅವರು ತಮ್ಮ ನಿವಾಸದಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ಮೂಲತಃ ಧಾರವಾಡ ಜಿಲ್ಲೆಯವರಾದ ಮಕ್ತುಮ್ ಹುಸ್ಸೇನ ಅವರು ಇತ್ತೀಚೆಗೆ, ಅಂದರೆ ಕಳೆದತಿಂಗಳಷ್ಟೇ ಕೊತಬಾಳ ಗ್ರಾಮ ಪಂಚಾಯಿತಿಯ ಪಿಡಿಒ ಆಗಿ ಅಧಿಕಾರ ವಹಿಸಿಕೊಂಡಿದ್ದರು. ಅವರ ಅಕಾಲಿಕ ಸಾವಿನಿಂದ ಕುಟುಂಬದವರು & ಸ್ಥಳೀಯರು ಶೋಕಕ್ಕೆ ಒಳಗಾಗಿದ್ದಾರೆ.

**ಆತ್ಮಹತ್ಯೆಗೆ ಕಾರಣ ಸ್ಪಷ್ಟವಿಲ್ಲ :** ಈ ದುರ್ಘಟನೆಗೆ ನಿಖರ ಕಾರಣ ಇನ್ನೂ ತಿಳಿದು ಬಂದಿಲ್ಲ. ಆದರೆ 2022-23ನೇ ಸಾಲಿನಲ್ಲಿ ಇವರ ಮೇಲೆ ಲೋಕಾಯುಕ್ತ ದಾಳಿ ನಡೆದಿದ್ದು, ಆ ಪ್ರಕರಣದ ಬಗ್ಗೆ ಅವರು ಮಾನಸಿಕ ಒತ್ತಡದಲ್ಲಿದ್ದರು ಎಂಬ ಮಾಹಿತಿ ಕುಟುಂಬದ ಸದಸ್ಯರಿಂದ ತಿಳಿದು ಬಂದಿದೆ. ಈ ವಿಷಯವನ್ನು ಅವರು ಮನಸ್ಸಿಗೆ ತುಂಬಾ ಹಚ್ಚಿಕೊಂಡಿದ್ದರು ಎಂದು ಹೇಳಲಾಗಿದೆ.

**ಘಟನೆ ಬೆಳಕಿಗೆ ಬಂದದ್ದು ಹೇಗೆ? :** ಕಳೆದ ಎರಡು ದಿನಗಳಿಂದ ಪತ್ನಿಯ ಕರೆಗಳಿಗೆ ಪ್ರತಿಕ್ರಿಯಿಸದ ಹಿನ್ನೆಲೆಯಲ್ಲಿ ಆತಂಕಗೊಂಡ ಪತ್ನಿ, ಮಕ್ತುಮ್ ಹುಸ್ಸೇನ ವಾಸಿಸುತ್ತಿದ್ದ ಬಾಡಿಗೆ ಮನೆಯ ಮಾಲೀಕರಿಗೆ ಕರೆ ಮಾಡಿ ವಿಚಾರಿಸಲು ಹೇಳಿದ್ದಾರೆ. ಮನೆಗೆ ತೆರಳಿ ಪರಿಶೀಲಿಸಿದಾಗ ಅವರು ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದಾರೆ.

ಮೃತರು ಪತ್ನಿ ಹಾಗೂ ಮೂವರು ಪುತ್ರರನ್ನು ಅಗಲಿದ್ದಾರೆ. ಅವರ ಕುಟುಂಬದ ಮೇಲೆ ದುಃಖದ ನೆರಳು ಆವರಿಸಿದೆ. ಘಟನಾ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಂಡಿದ್ದಾರೆ.

# ಸರ್ಕಾರದ ವಿರುದ್ಧ ಭೂ ಸಂತ್ರಸ್ಥರಿಂದ ಮೇ.2 ರಿಂದ ಸರಣಿ ಉಪವಾಸ ಸತ್ಯಾಗ್ರಹ




ಬಳ್ಳಾರಿ: ತಾಲೂಕಿನ ಕುಡುತಿನಿ ಬಳಿ ಕೈಗಾರಿಕೆಗಳಿಗೆಂದು ಕೆಐಡಿಬಿ ವಶಪಡಿಸಿಕೊಂಡ ನಮ್ಮ ಜಮೀನಿಗೆ ನ್ಯಾಯವಾದ ಭೂ ಬೆಲೆ ನೀಡಬೇಕು, ಉದ್ದೇಶಿತ ಕೈಗಾರಿಕೆಗಳನ್ನು ಪ್ರಾರಂಭ ಮಾಡಬೇಕು, ಭೂ ಸಂತಸ್ತರ ಕುಟುಂಬಗಳಿಗೆ ಉದ್ಯೋಗ ನೀಡಬೇಕು, ಇಲ್ಲವಾದರೆ ನಮ್ಮ ಭೂಮಿ ನಮಗೆ ವಾಪಸು ನೀಡಬೇಕು ಎಂದು ಹೋರಾಟ ಮಾಡುವ ಭೂ ಸಂತ್ರಸ್ಥ ರೈತರ ಹೋರಾಟವನ್ನು ಪೊಲೀಸರಿಂದ ಹತ್ತಿಕ್ಕುವ ಪ್ರಯತ್ನ ನಡೆಯುತ್ತಿದೆ. ಅದಕ್ಕಾಗಿ ಈ ಧೋರಣೆಯನ್ನು ಖಂಡಿಸಿ ಮೇ.2 ರಿಂದ ಸರಣಿ ಉಪವಾಸ ಸತ್ಯಾಗ್ರಹ ನಡೆಸಲು ನಿರ್ಧರಿಸಿದೆ.

ಈ ಕುರಿತು ಇಂದು ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿದ ಜೆ.ಸತ್ಯಬಾಬು. ಸರ್ಕಾರ, ಪೊಲೀಸರು ಜಿಂದಾಲ್ ನ ಕೈಗೊಂಬೆಗಳಾಗಿ ಕೆಲಸ ಮಾಡುತ್ತಿದ್ದಾರೆ. ಸಂಡೂರು ಶಾಸಕರ ಕಛೇರಿಗೆ ತೆರಳಿ ಮನವಿ ಮಾಡಲು ಪಾದಯಾತ್ರೆ ಹೊರಟರೆ ರೈತರನ್ನು ಬಂಧಿಸುತ್ತಾರೆ.

ಆರ್ಸಲ್ ಮಿತ್ತಲ್ ಗಾಗಿ ವಶಪಡಿಸಿಕೊಂಡ ಭೂಮಿಯಲ್ಲಿ ಈಗ ಜಿಂದಾಲ್ ಕಂಪನಿಯ ಜೆ.ಎಫ್. ಇ. ಎಲೆಕ್ಟಿಕಲ್ ಗಾಗಿ 204 ಎಕರೆಗಳು ಒಳಗೊಂಡು ಒಟ್ಟು 900 ಎಕರೆಗಳ ಭೂಮಿಯನ್ನು ಜಿಂದಾಲ್ ಕಂಪನಿಗೆ ಪರಬಾರೆ ಮಾಡಲು ಮುಂದಾಗಿರುವ ಕೆಐಡಿಬಿ ಯು ಕೋರ್ಟ್ ಗೆ ಸುಳ್ಳು ಹೇಳಿಕೆ ನೀಡಿದೆ.

ಶಾಂತ ರೀತಿಯಿಂದ, ಕಾನೂನು ಬದ್ಧವಾಗಿ ಹೋರಾಟ ಮಾಡುತ್ತಾ ಧರಣಿ ಕುಳಿತಿರುವ ರೈತರು ರಸ್ತೆ ತಡೆ ಮಾಡುತ್ತಾರೆ, ಅಲ್ಲಿಯೆ ಧರಣಿ ಮಾಡುತ್ತಾರೆ. ಸಾರ್ವಜನಿಕರಿಗೆ ತೊಂದರೆ ಉಂಟು ಮಾಡುವ ಹೋರಾಟವನ್ನು ಸಮಿತಿಯು ಮಾಡಲಿದೆ ಎಂದು ಸುಳ್ಳು ಹೇಳಿಕೆಯನ್ನು ನ್ಯಾಯಾಲಯಕ್ಕೆ ನೀಡಿ ರೈತರ ಮೇಲೆ ಇಂಜಕ್ಸನ್ ಆರ್ಡರ್ ತಂದಿದ್ದಾರೆ. ಜೂನ್ 7 ರ ವರೆಗೆ 144 ಸೆಕ್ಸನ್ ಸಹ ಜಾರಿಮಾಡಲಾಗಿದೆ.

ಅದಕ್ಕಾಗಿ ಈ ಸರ್ಕಾರಕ್ಕೆ ಪಾಠಕಲಿಸಲು ಹೋರಾಟವನ್ನು ತೀವ್ರಗೊಳಿಸಲಿದೆಂದು ಹೇಳಿದರು. ಹೋರಾಟ ಸಮಿತಿಯ ಮುಖಂಡರು ಇದ್ದರು.

# ಜಿಲ್ಲೆಯಲ್ಲಿ ಖೇಲೋ ಇಂಡಿಯಾ ತರಬೇತಿ ಕೇಂದ್ರ ಸ್ಥಾಪಿಸಲು ಅರ್ಜಿ ಆಹ್ವಾನ

ಕೊಪ್ಪಳ : ಕೇಂದ್ರ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯದ ಸುತ್ತೋಲೆಯನ್ವಯ ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷಿ ಖೇಲೋ ಇಂಡಿಯಾ ಉನ್ನತ ಕ್ರೀಡಾ ಯೋಜನೆ ಅಡಿಯಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಹೊಸ ಖೇಲೋ ಇಂಡಿಯಾ ತರಬೇತಿ ಕೇಂದ್ರಗಳನ್ನು ಸ್ಥಾಪಿಸಲು ಖಾಸಗಿ ಸಂಸ್ಥೆಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳು, ನಿಯಮಗಳು ಹಾಗೂ ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ಕಾರ್ಯಾಲಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ಕೊಪ್ಪಳ ಇಲ್ಲಿ ಅಥವಾ ಕಚೇರಿಯ ದೂರವಾಣಿ ಸಂಖ್ಯೆ 08539-230121 ಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಡಿತರ ಅಕ್ಕಿಯ ಅಕ್ರಮ ಮಾರಾಟಕ್ಕೆ ಕಡಿವಾಣ ಹಾಕಿ: ರೆಡ್ಡಿ ಶ್ರೀನಿವಾಸ ನಿರ್ದೇಶನ




ಕೊಪ್ಪಳ: ಅನ್ನಭಾಗ್ಯ ಯೋಜನೆಯಡಿ ನೀಡುತ್ತಿರುವ ಪಡಿತರ ಅಕ್ಕಿಯನ್ನು ಕಳ್ಳಸಾಗಣೆ ಮಾಡುತ್ತಿರುವವರ ವಿರುದ್ಧ ಕಠಿಣ ಕ್ರಮ ಕೈಗೊಂಡು ಜಿಲ್ಲೆಯಲ್ಲಿ ಪಡಿತರ ಅಕ್ಕಿ ಕಳ್ಳಸಾಗಣೆಗೆ ಯಾವುದೇ ರೀತಿಯ ಅವಕಾಶ ನೀಡದಂತೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಕೊಪ್ಪಳ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಅವರು ಆಹಾರ ಇಲಾಖೆಯ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಂಬಂಧ ಕೊಪ್ಪಳ ಜಿಲ್ಲಾ ಪಂಚಾಯತ್‌ನ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ಗುರುವಾರದಂದು ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಅನ್ನಭಾಗ್ಯ ಯೋಜನೆಯಡಿ ವಿತರಿಸಲಾಗುವ ಪಡಿತರ ಧಾನ್ಯಗಳನ್ನು ಮಾರಾಟಕ್ಕೆ ಅವಕಾಶವಿರುವುದಿಲ್ಲ. ಆದ್ಯಾಗೂ ಸಹ ಪಡಿತರ ಅಕ್ಕಿಯನ್ನು ಅಕ್ರಮ ದಾಸ್ತಾನು ಮತ್ತು ಮಾರಾಟ ಮಾಡುತ್ತಿರುವ ಪ್ರಕರಣಗಳು ವರದಿಯಾಗಿದೆ. ಇಂತಹ ಪ್ರಕರಣಗಳಲ್ಲಿ ತಪ್ಪಿತಸ್ಥರ ವಿರುದ್ಧ ತ್ವರಿತವಾಗಿ ಕ್ರಮ ಕೈಗೊಳ್ಳುವುದರ ಜೊತೆಗೆ ಅವರ ಮೇಲೆ ಚಾರ್ಜ್ ಶೀಟ್ ಹಾಕುವ ವ್ಯವಸ್ಥೆಯಾಗಬೇಕು. ಅಕ್ರಮ ಪಡಿತರ ಚೀಟಿ ಮಾರಾಟಕ್ಕೆ ಸಂಬಂಧಿಸಿದಂತೆ ನ್ಯಾಯಾಲಯವು ತಪ್ಪಿತಸ್ಥರಿಗೆ ಶಿಕ್ಷೆ ವಿಧಿಸಿದ್ದು, ಇದರ ಬಗ್ಗೆ ಜನರಿಗೆ ಅರಿವು ಮೂಡಿಸಬೇಕು. ಪಡಿತರ ವಿತರಣೆಯನ್ನು ಜನರಿಗೆ ಅನುಕೂಲವಾಗುವಂತೆ ಮಾಡಿ. ಈ ಹಿನ್ನೆಲೆಯಲ್ಲಿ ಜಿಲ್ಲೆಯ ಎಲ್ಲಾ ನ್ಯಾಯಬೆಲೆ ಅಂಗಡಿಗಳು ಕಾರ್ಯನಿರ್ವಹಿಸಬೇಕು. ಎಲ್ಲಾ ನ್ಯಾಯಬೆಲೆ ಅಂಗಡಿಗಳಿಗೆ ಸಿಸಿ ಕ್ಯಾಮರಾ ಅಳವಡಿಕೆಗೆ ಕ್ರಮ ಕೈಗೊಳ್ಳಿ. ಆಹಾರ ಸಾಮಾಗ್ರಿಗಳ ವಿತರಣೆಗೂ ಮುನ್ನ ಅದರ ಗುಣಮಟ್ಟವನ್ನು ಪರಿಶೀಲಿಸಬೇಕು. ಈ ಬಗ್ಗೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಗಳ ಎಲ್ಲಾ ಅಧ್ಯಕ್ಷರು, ಸದಸ್ಯರು ಸಹ ನ್ಯಾಯಬೆಲೆ ಅಂಗಡಿಗಳಿಗೆ ಭೇಟಿ ನೀಡಿ ಪರಿಶೀಲಿಸಬೇಕು ಎಂದರು.

ಗೃಹಲಕ್ಷ್ಮಿ ಯೋಜನೆಗೆ ಸಂಬಂಧಿಸಿದಂತೆ ಫಲಾನುಭವಿಗಳು ತಮ್ಮ ಸಮಸ್ಯೆಗಳನ್ನು ಪರಿಹರಿಸಲು ಸಿಡಿಪಿಓ ಕಛೇರಿಗೆ ಭೇಟಿ ನೀಡುವ ಸಂದರ್ಭದಲ್ಲಿ ಅವರಿಗೆ ಸರಿಯಾದ ರೀತಿಯಲ್ಲಿ ಸ್ಪಂದಿಸುತ್ತಿಲ್ಲ ಎಂಬ ದೂರುಗಳು ಕೇಳಿ ಬರುತ್ತಿವೆ. ಇದನ್ನು ಕೂಡಲೇ ಸರಿಪಡಿಸಿಕೊಳ್ಳಬೇಕು. ಮರಣ ಹೊಂದಿದ ಫಲಾನುಭಿಗಳಿಗೆ ಸಹಾಯಧನ ಸಂದಾಯವಾಗುತ್ತಿದ್ದಲ್ಲಿ ತಕ್ಷಣ ಅದನ್ನು ನಿಲ್ಲಿಸಲು ಕ್ರಮ ಕೈಗೊಳ್ಳಬೇಕು. ಗೃಹಜ್ಯೋತಿ ಯೋಜನೆಯಡಿ ನೋಂದಣಿಯಾಗದಿರುವ ಅರ್ಜಿಗಳನ್ನು ಪರಿಶೀಲಿಸಿ, ತಾಂತ್ರಿಕ ಸಮಸ್ಯೆಗಳಿದ್ದಲ್ಲಿ ಅವುಗಳನ್ನು ಸರಿಪಡಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು. ಸರ್ಕಾರದಿಂದ ಯುವನಿಧಿ ಪ್ಲಸ್ ಉಪಕ್ರಮದಡಿಯಲ್ಲಿ ನೀಡುತ್ತಿರುವ ಕೌಶಲ್ಯಾಧಾರಿತ ತರಬೇತಿ ಕಾರ್ಯಕ್ರಮಕ್ಕೆ ಜಿಲ್ಲೆಯ ಎಲ್ಲಾ ಯುವನಿಧಿ ಫಲಾನುಭವಿಗಳನ್ನು ನೋಂದಾಯಿಸಬೇಕು. ಶಕ್ತಿ ಯೋಜನೆಯಡಿ ಇಲ್ಲಿಯವರೆಗೆ ನಮ್ಮ ಜಿಲ್ಲೆಯಲ್ಲಿ ಸುಮಾರು 11 ಕೋಟಿ 22 ಲಕ್ಷಕ್ಕೂ ಅಧಿಕ ಮಹಿಳಾ ಫಲಾನುಭವಿಗಳು ಉಚಿತ ಬಸ್ ಸೌಲಭ್ಯವನ್ನು ಪಡೆದುಕೊಂಡಿದ್ದಾರೆ ಎಂದು ಹೇಳಿದರು.

ಜನ ಸಾಮಾನ್ಯರ ಏಳ್ಗೆಗಾಗಿ ರಾಜ್ಯ ಸರ್ಕಾರವು ಶಕ್ತಿ ಯೋಜನೆ, ಗೃಹಲಕ್ಷ್ಮಿ, ಅನ್ನಭಾಗ್ಯ, ಗೃಹಜ್ಯೋತಿ ಹಾಗೂ ಯುವನಿದಿ, ಈ ಮಹತ್ತರವಾದ ಐದು ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿದೆ. ರಾಜ್ಯ ಸರ್ಕಾರದ ಮಹತ್ತರವಾದ ಐದು ಗ್ಯಾರಂಟಿ ಯೋಜನೆಗಳು ಬಡ, ಹಿಂದುಳಿದ ವರ್ಗಗಳ ಹಾಗೂ ಜನ ಸಾಮಾನ್ಯರ ಬಧುಕಿಗೆ ಆಸರೆಯಾಗಿವೆ. ಈ ಯೋಜನೆಗಳಡಿ ನಮ್ಮ ಜಿಲ್ಲೆಯಲ್ಲಿ ಸಾಧಿಸಿರುವ ಪ್ರಗತಿಯ ಬಗ್ಗೆ ಸಾರ್ವಜನಿಕರಿಗೆ ತಿಳಿಸಬೇಕು. ಈ ಬಗ್ಗೆ ಹೆಚ್ಚಿನ ಪ್ರಚಾರ ಚಟುವಟಿಕೆಗಳನ್ನು ಹಮ್ಮಿಕೊಳ್ಳಬೇಕು. ಗ್ರಾ.ಪಂ ವ್ಯಾಪ್ತಿಯಲ್ಲಿ ಗ್ಯಾರಂಟಿ ಯೋಜನೆಗಳ ಸಭೆ ನಡೆಯಬೇಕು. ಮೇ 16 ಮತ್ತು 17 ರಂದು ನಡೆಯುವ ಕನಕಗಿರಿ ಉತ್ಸವದಲ್ಲಿ ಗ್ಯಾರಂಟಿ ಯೋಜನೆಗಳ ಕುರಿತು ಮಳಿಗೆಗಳನ್ನು ಹಮ್ಮಿಕೊಂಡು ಜನರಿಗೆ ಹೆಚ್ಚಿನ ಪ್ರಚಾರ ಮೂಡಿಸಲು ಐದು ಗ್ಯಾರಂಟಿ ಯೋಜನೆಗಳ ಅನುಷ್ಠಾನಾಧಿಕಾರಿಗಳಿಗೆ ಸೂಚನೆ ನೀಡಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ವರ್ಣಿತ್ ನೇಗಿ ಅವರು ಮಾತನಾಡಿ, ಅರ್ಜಿ ಹಾಕಿದ ಫಲಾನುಭವಿಗಳ ಪೈಕಿ ಕೆಲವರಿಗೆ ಗೃಹಲಕ್ಷ್ಮಿ ಯೋಜನೆ ಸಹಾಯಧನ ಸಿಗುತ್ತಿಲ್ಲ. ಇದಕ್ಕಾಗಿ ಸೂಕ್ತ ಕಾರಣ ಏನು ಮತ್ತು ಅದಕ್ಕೆ ಯಾವ ರೀತಿ ಪರಿಹಾರ ಕಂಡುಕೊಳ್ಳಬಹುದು ಎಂಬುವುದರ ಬಗ್ಗೆ ಫಲಾನುಭವಿಗಳಿಗೆ ತಿಳಿಸಬೇಕು. ಮರಣ ಹೊಂದಿದ ಫಲಾನುಭವಿಗಳ ಮಾಹಿತಿಯನ್ನು ಅಂಗನವಾಡಿ ಕಾರ್ಯಕರ್ತೆಯರ ಮೂಲಕ ಆಯಾ ಗ್ರಾ.ಪಂ.ಗಳಿಗೆ ತಿಳಿಸುವ ಕೆಲಸ ಆಗಬೇಕು. ಗ್ರಾಮ ಸಭೆಗಳಲ್ಲಿಯೇ ಗ್ಯಾ.ಪಂ ಮಟ್ಟದ ಗ್ಯಾರಂಟಿ ಸಭೆಗಳನ್ನು ನಡೆಸಲು ಎಲ್ಲಾ ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಯುವನಿಧಿ ಪ್ಲಸ್ ಕಾರ್ಯಕ್ರಮ ನಿರುದ್ಯೋಗಿ ವಿದ್ಯಾವಂತ ಯುವ ಜನರಿಗೆ ಉದ್ಯೋಗಕ್ಕೆ ಅರ್ಹರನ್ನಾಗಿ ಮಾಡುವ ಉದ್ದೇಶ ಹೊಂದಿದೆ. ಜಿಲ್ಲೆಯ ಎಲ್ಲಾ ಯುವನಿಧಿ ಫಲಾನುಭವಿಗಳು ಕೌಶಲ್ಯ ಆಧಾರಿತ ತರಬೇತಿ ಕಾರ್ಯಕ್ರಮಕ್ಕೆ ನೋಂದಣಿ ಮಾಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್.ಬಿ ಖಾದ್ರಿ, ಮಂಜುನಾಥ ಗೊಂಡಬಾಳ, ಅಮರೇಶಪ್ಪ ಎಸ್.ಜಿ. ಅವರು ಮಾತನಾಡಿದರು.

ಗೃಹಲಕ್ಷ್ಮೀ ಯೋಜನೆಯಡಿ ಕೊಪ್ಪಳ ಜಿಲ್ಲೆಯ 3,21,019 ಫಲಾನುಭವಿಗಳಿಗೆ ಆಗಸ್ಟ್-2023 ರಿಂದ ಫೆಬ್ರವರಿ-2026ರ ವರೆಗೆ ಡಿಬಿಟಿ ಮೂಲಕ ಹಣ ಪಾವತಿಸಲಾಗಿದೆ. ಗೃಹಜ್ಯೋತಿ ಯೋಜನೆಯಡಿ ಮಾರ್ಚ್-2026ರ ಅಂತ್ಯದವರೆಗೆ 2,89,212 ಗ್ರಾಹಕರಿಗೆ ಉಚಿತ ವಿದ್ಯುತ್ ಸೌಲಭ್ಯ ದೊರೆತಿದ್ದು, ಇದಕ್ಕಾಗಿ ಇಲ್ಲಿಯವರೆಗೆ 388.23 ಕೋಟಿ ರೂ.ಗಳನ್ನು ಖರ್ಚು ಮಾಡಲಾಗಿದೆ. ಕೊಪ್ಪಳ ಜಿಲ್ಲೆಯಲ್ಲಿ 3,63,521 ಪಡಿತರ ಕಾರ್ಡ್ಗಳಿದ್ದು, ಅನ್ನಭಾಗ್ಯ ಯೋಜನೆಯಡಿ ಏಪ್ರಿಲ್-2026ರ ವರೆಗೆ ಪ್ರತಿ ಸದಸ್ಯರಿಗೆ 10 ಕೆ.ಜಿ ಯಂತೆ 12,393 ಮೆ.ಟನ್ ಪಡಿತರ ಆಹಾರ ಪದಾರ್ಥ ಹಂಚಿಕೆ ಮಾಡಲಾಗಿದೆ. ಶಕ್ತಿ ಯೋಜನೆಯಡಿ ಮಾರ್ಚ್-2026ರ ಮಾಹೆಯಲ್ಲಿ 34,84,433 ಮಹಿಳೆಯರು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಬಸ್‌ಗಳಲ್ಲಿ ಉಚಿತವಾಗಿ ಪ್ರಯಾಣಿಸಿದ್ದು, ಈ ಯೋಜನೆಯಡಿ ಜೂನ್-2023 ರಿಂದ ಮಾರ್ಚ್-2026ರ ವರೆಗೆ ಕೊಪ್ಪಳ ಜಿಲ್ಲೆಯಲ್ಲಿ 11,22,17,504 ಮಹಿಳೆಯರು ಸೌಲಭ್ಯ ಪಡೆದುಕೊಂಡಿದ್ದಾರೆ. ಯುವನಿಧಿ ಯೋಜನೆಯಡಿ ಜನವರಿ-2026ರವರೆಗೆ 14,266 ಫಲಾನುಭವಿಗಳು ನೋಂದಣಿಯಾಗಿದ್ದು, ಜನವರಿ ಅಂತ್ಯದವರೆಗೆ ಒಟ್ಟು ಮೊತ್ತ ರೂ. 30,32,02,500 ಪಾವತಿಸಲಾಗಿರುತ್ತದೆ ಎಂದು ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸದಸ್ಯರು, ಜಿಲ್ಲೆಯ ವಿವಿಧ ತಾಲ್ಲೂಕುಗಳ ಅಧ್ಯಕ್ಷರು ಹಾಗೂ ಗ್ಯಾರಂಟಿ ಯೋಜನೆ ಅನುಷ್ಠಾನ ಇಲಾಖೆಗಳ ಅಧಿಕಾರಿಗಳು, ತಾ.ಪಂ ಇಓ.ಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅಡವಿ ಸೋಮನಾಳ ಗ್ರಾಮ ಪಂಚಾಯತಿಗೆ ಮಹಿಳೆಯರ ಮುತ್ತಿಗೆ: ಕುಡಿಯುವ ನೀರಿಗಾಗಿ ಆಕ್ರೋಶ



ಮುದ್ದೇಬಿಹಾಳ :ಮನೆಗಳ ಎದುರು ಕಾಟಾಚಾರಕ್ಕೆ ಜೆಜೆಎಂ ನಳಗಳನ್ನು ಅಳವಡಿಸಲಾಗಿದೆ. ಆದರೆ, ಅವುಗಳಲ್ಲಿ ಹನಿ ನೀರು ಬರುತ್ತಿಲ್ಲ. ಸುಡುವ ಬಿಸಿಲಿಗೆ ಕುಡಿಯುವ ನೀರಿಲ್ಲದೆ ಪರದಾಡುವಂತಾಗಿದೆ" ಎಂದು ಆಕ್ರೋಶ ವ್ಯಕ್ತಪಡಿಸಿ ಅಡವಿ ಸೋಮನಾಳ ಗ್ರಾಮದ ಮಹಿಳೆಯರು ಬುಧವಾರ ಸ್ಥಳೀಯ ಗ್ರಾಮ ಪಂಚಾಯತಿ ಕಚೇರಿಗೆ ಮುತ್ತಿಗೆ ಹಾಕಿ ಅಧಿಕಾರಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

**ಹನಿ ನೀರಿಲ್ಲ, ಚರಂಡಿ ನರಕ:**

ಗ್ರಾಮದಲ್ಲಿ ನೀರಿನ ಸಮಸ್ಯೆ ದಿನೇ ದಿನೇ ಉಲ್ಬಣಿಸುತ್ತಿದ್ದರೂ ಪಂಚಾಯತಿ ಅಧಿಕಾರಿಗಳು ಕಣ್ಣು ಮುಚ್ಚಿ ಕುಳಿತಿದ್ದಾರೆ ಎಂದು ಪ್ರತಿಭಟನಾಕಾರರು ದೂರಿದರು. "ವರ್ಷಾನುಗಟ್ಟಲೆ ಆದರೂ ನೀರಿನ ಸಮಸ್ಯೆ ಬಗೆಹರಿಯುತ್ತಿಲ್ಲ. ಇತ್ತ ಚರಂಡಿಗಳು ಸ್ವಚ್ಛವಿಲ್ಲದ ಕಾರಣ ಕೊಳಚೆ ನೀರು ರಸ್ತೆ ಮೇಲೆ ಹರಿದು ಮನೆಗಳ ಒಳಗೆ ನುಗ್ಗುತ್ತಿದೆ. ಸೊಳ್ಳೆಗಳ ಕಾಟದಿಂದ ರೋಗರುಜಿನಗಳ ಭೀತಿ ಎದುರಾಗಿದೆ" ಎಂದು ತಮ್ಮ ಸಂಕಷ್ಟ ತೋಡಿಕೊಂಡರು.

**ಅಧಿಕಾರಿಗಳಿಗೆ ಸ್ಥಳ ದರ್ಶನ ಮಾಡಿಸಿದ ಮಹಿಳೆಯರು:**

ಕಚೇರಿಯಲ್ಲೇ ಕುಳಿತಿದ್ದ ಪಿಡಿಓ ಮತ್ತು ಕಾರ್ಯದರ್ಶಿಗಳನ್ನು ಬಿಗಿಪಟ್ಟು ಹಿಡಿದ ಮಹಿಳೆಯರು, ಗ್ರಾಮದ ಓಣಿಗಳಿಗೆ ಕರೆದೊಯ್ದರು. ರಸ್ತೆಯ ಮೇಲೆ ಹರಿಯುತ್ತಿರುವ ಚರಂಡಿ ನೀರು ಹಾಗೂ ಒಣಗಿದ ನಳಗಳನ್ನು ತೋರಿಸಿ ಅಧಿಕಾರಿಗಳ ವಿರುದ್ಧ ಜಟಾಪಟಿ ನಡೆಸಿದರು. "ಸಮಸ್ಯೆ ಕಣ್ಣಿಗೆ ಕಾಣುತ್ತಿದ್ದರೂ ಕಚೇರಿಯಲ್ಲಿ ಕಾಲಹರಣ ಮಾಡುತ್ತಿದ್ದೀರಿ" ಎಂದು ತರಾಟೆಗೆ ತೆಗೆದುಕೊಂಡ ಘಟನೆ ನಡೆಯಿತು.

**ನಾಳೆ ಬೋರ್‌ವೆಲ್ ಕೊರೆಸಲಾಗುವುದು – ಪಿಡಿಓ:**

ಗ್ರಾಮಸ್ಥರ ಆಕ್ರೋಶಕ್ಕೆ ಪ್ರತಿಕ್ರಿಯಿಸಿದ ಪಿಡಿಓ ನಿರ್ಮಲಾ ತೋಟದ ಅವರು, "ಗ್ರಾಮದಲ್ಲಿ ನೀರಿನ ಮೂಲ ಕಡಿಮೆ ಇರುವುದು ನಿಜ. ಬಹು ಹಳ್ಳಿ ಕುಡಿಯುವ ನೀರು ಸರಬರಾಜು ಯೋಜನೆಯಲ್ಲೂ ನೀರಿನ ಅಭಾವವಿದೆ. ಟಾಸ್ಕ್ ಫೋರ್ಸ್ ಸಮಿತಿಯಡಿ ಈಗಾಗಲೇ ಬೋರ್‌ವೆಲ್ ಕೊರೆಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ನಾಳೆಯೇ ಬೋರ್‌ವೆಲ್ ಕೊರೆಸಿ ನೀರಿನ ವ್ಯವಸ್ಥೆ ಮಾಡಲಾಗುವುದು" ಎಂದು ಭರವಸೆ ನೀಡಿದರು.

**ಬಿಸಿ ಮುಟ್ಟಿಸುವ ಎಚ್ಚರಿಕೆ:**

ಪಂಚಾಯತಿ ಅಧಿಕಾರಿಗಳ ಭರವಸೆಯಿಂದ ಸಮಾಧಾನಗೊಳ್ಳದ ಗ್ರಾಮಸ್ಥರು, "ಪ್ರತಿ ಬಾರಿಯೂ ಇದೇ ರಾಗ ಹಾಡುತ್ತೀರಿ. ನೀಡಿದ ಗಡುವಿನೊಳಗೆ ನೀರಿನ ವ್ಯವಸ್ಥೆ ಆಗದಿದ್ದರೆ ಮತ್ತು ಚರಂಡಿ ಸ್ವಚ್ಛಗೊಳಿಸದಿದ್ದರೆ ಮುಂದಿನ ದಿನಗಳಲ್ಲಿ ಪಂಚಾಯತಿ ಕಚೇರಿಗೆ ಬೀಗ ಹಾಕಿ ಉಗ್ರ ಪ್ರತಿಭಟನೆ ನಡೆಸಲಾಗುವುದು" ಎಂದು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮದ ನೂರಾರು ಮಹಿಳೆಯರು ಹಾಗೂ ಪುರುಷರು ಉಪಸ್ಥಿತರಿದ್ದರು.

# ಮುದ್ದೇಬಿಹಾಳದ ಬಿ.ಎ.ಎಸ್ ಶಾಲೆಯಲ್ಲಿ ಮೇ 3ಕ್ಕೆ ಬೃಹತ್ ಉದ್ಯೋಗ ಮೇಳ: 2000 ಅಭ್ಯರ್ಥಿಗಳಿಗೆ ನೇಮಕಾತಿ ಅವಕಾಶ

ಮುದ್ದೇಬಿಹಾಳ: ಪಟ್ಟಣದ ಆಲಮಟ್ಟಿ ರಸ್ತೆಯಲ್ಲಿರುವ ಬಿ.ಎ.ಎಸ್ (ಃಂಖ) ಅಂತರಾಷ್ಟ್ರೀಯ ಶಾಲೆಯ ಆವರಣದಲ್ಲಿ ಮೇ 3 ರಂದು ಬೆಳಿಗ್ಗೆ 10 ಗಂಟೆಯಿಂದ ಬೃಹತ್ ಉದ್ಯೋಗ ಮೇಳ–2026 ಅನ್ನು ಆಯೋಜಿಸಲಾಗಿದೆ ಎಂದು ಶಾಲೆಯ ಆಡಳಿತಾಧಿಕಾರಿ ಪ್ರಭುಗೌಡ ಬಿರಾದಾರ ತಿಳಿಸಿದರು.

?ಗುರುವಾರ ಶಾಲಾ ಆವರಣದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮೇಳದ ಭಿತ್ತಿಪತ್ರ ಬಿಡುಗಡೆ ಮಾಡಿ ಮಾತನಾಡಿದ ಅವರು, "ಬಿ.ಎ.ಎಸ್ ಸ್ಟಾಫಿಂಗ್ ಸೊಲ್ಯೂಷನ್ಸ್ ಪ್ರೈವೇಟ್ ಲಿಮಿಟೆಡ್ ಸಹಯೋಗದೊಂದಿಗೆ ಈ ಮೇಳ ಆಯೋಜಿಸಲಾಗಿದೆ. ಇದರಲ್ಲಿ ಸುಮಾರು 2,000ಕ್ಕೂ ಹೆಚ್ಚು ಹುದ್ದೆಗಳಿದ್ದು, ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳಿಗೆ ಮುಕ್ತ ಅವಕಾಶವಿದೆ" ಎಂದು ಮಾಹಿತಿ ನೀಡಿದರು.




**ಅರ್ಹತೆ ಮತ್ತು ನೇಮಕಾತಿ ವಿವರ:**

"ಎಸ್.ಎಸ್.ಎಲ್.ಸಿ (ತೇರ್ಗಡೆ/ಅನುತ್ತೀರ್ಣ), ಪಿಯುಸಿ, ಐಟಿಐ, ಡಿಪ್ಲೊಮಾ ಹಾಗೂ ಯಾವುದೇ ಪದವಿ ಹೊಂದಿದ ಅಭ್ಯರ್ಥಿಗಳು ಮೇಳದಲ್ಲಿ ಭಾಗವಹಿಸಬಹುದು. ಆಯ್ಕೆಯಾದವರಿಗೆ ಬೆಂಗಳೂರು, ಕೋಲಾರ ಹಾಗೂ ದೊಡ್ಡಬಳ್ಳಾಪುರದಲ್ಲಿರುವ ಆಪಲ್ ಉತ್ಪಾದನಾ ಕೈಗಾರಿಕೆ ಸೇರಿದಂತೆ ಪ್ರಮುಖ ಕಂಪನಿಗಳಲ್ಲಿ ಅಸೆಂಬ್ಲಿ ವರ್ಕರ್ಸ್, ಪಿಕರ್ಸ್, ಪ್ಯಾಕರ್ಸ್ ಹಾಗೂ ಸಹಾಯಕರ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಾಗುವುದು" ಎಂದರು.

ಉದ್ಯೋಗದಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ ಮಾಸಿಕ 16,500 ರೂ. ದಿಂದ 21,000 ರೂ. ವರೆಗೆ ವೇತನ ನೀಡಲಾಗುವುದು. ಇದರೊಂದಿಗೆ ಉಚಿತ ವಸತಿ, ಓವರ್‌ಟೈಮ್ ಪ್ರೋತ್ಸಾಹಧನ, ಇಎ (ಇಖಖ) ಮತ್ತು ಪಿಎಫ್ (ಕಈ) ಸೌಲಭ್ಯಗಳು ದೊರೆಯಲಿವೆ. ಇದು ನೇರ ಸಂದರ್ಶನ ಆಗಿರುವುದರಿಂದ ಅಭ್ಯರ್ಥಿಗಳು ದಾಖಲೆಗಳೊಂದಿಗೆ ಬಂದು ತಕ್ಷಣವೇ ಉದ್ಯೋಗಕ್ಕೆ ಸೇರ್ಪಡೆಗೊಳ್ಳಬಹುದು ಎಂದು ವಿವರಿಸಿದರು. ಈ ಪತ್ರಿಕಾಗೋಷ್ಠಿಯಲ್ಲಿ ಸಂಸ್ಥೆಯ ಕಾರ್ಯದರ್ಶಿ ಸುಮಂಗಲಾ ಬಿರಾದಾರ, ಶೈಕ್ಷಣಿಕ ಸಂಯೋಜಕ ಸತೀಶ್ ವಾಲಿಕಾರ ಉಪಸ್ಥಿತರಿದ್ದರು.

# ಸೊಳ್ಳೆಗಳ ನಿಯಂತ್ರಣದಿಂದ ಮಲೇರಿಯಾ ಮುಕ್ತ ಸಮಾಜ ಸಾಧ್ಯ: ಡಾ. ಸತೀಶ್ ತಿವಾರಿ ಕರೆ



ಮುದ್ದೇಬಿಹಾಳ: ಮಲೇರಿಯಾ, ಡೆಂಗಿ, ಚಿಕುನ್‌ಗುನ್ಯಾ ಹಾಗೂ ಆನೆಕಾಲು ರೋಗದಂತಹ ಭೀಕರ ಕಾಯಿಲೆಗಳು ಸೊಳ್ಳೆಗಳಿಂದಲೇ ಹರಡುತ್ತಿದ್ದು, ಸಾರ್ವಜನಿಕರು ಸೊಳ್ಳೆಗಳ ಸಂತಾನೋತ್ಪತ್ತಿ ತಾಣಗಳನ್ನು ನಾಶಪಡಿಸುವ ಮೂಲಕ ಜಾಗೃತಿ ವಹಿಸಬೇಕು ಎಂದು ತಾಲೂಕ ಆರೋಗ್ಯ ಅಧಿಕಾರಿ ಡಾ. ಸತೀಶ್ ತಿವಾರಿ ಹೇಳಿದರು.

ಇಲ್ಲಿನ ತಾಲೂಕ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಶ್ರೀ ಸಿದ್ದಗಂಗಾ ಪ್ಯಾರಾ ಮೆಡಿಕಲ್ ಕಾಲೇಜ್ ಸಹಯೋಗದಲ್ಲಿ ಹಮ್ಮಿಕೊಂಡಿದ್ದ 'ವಿಶ್ವ ಮಲೇರಿಯಾ ದಿನಾಚರಣೆ' ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

ಆರೋಗ್ಯ ನಿರೀಕ್ಷಣಾಧಿಕಾರಿ ಎಂ.ಎಸ್. ಗೌಡರ ಮಾತನಾಡಿ, "ಹೆಣ್ಣು ಅನಾಫಿಲಿಸ್ ಸೊಳ್ಳೆ ಕಚ್ಚುವುದರಿಂದ ಮಲೇರಿಯಾ ಹರಡುತ್ತದೆ. ಚಳಿ, ವಿಪರೀತ ಜ್ವರ ಮತ್ತು ನಂತರ ಬೆವರುವಿಕೆ ಈ ರೋಗದ ಪ್ರಮುಖ ಲಕ್ಷಣಗಳು. ಇಂತಹ ಲಕ್ಷಣಗಳು ಕಂಡುಬಂದ ಕೂಡಲೇ ಹತ್ತಿರದ ಸರ್ಕಾರಿ ಆಸ್ಪತ್ರೆಯಲ್ಲಿ ರಕ್ತ ಪರೀಕ್ಷೆ ಮಾಡಿಸಿಕೊಳ್ಳಬೇಕು. ಮಲೇರಿಯಾ ದೃಢಪಟ್ಟಲ್ಲಿ ಪ್ರಮ್ಯಾಕ್ವಿನ್ ಮಾತ್ರೆಗಳ ಸೇವನೆಯಿಂದ ರೋಗವನ್ನು ಸಂಪೂರ್ಣವಾಗಿ ಗುಣಪಡಿಸಬಹುದು" ಎಂದು ಮಾಹಿತಿ ನೀಡಿದರು.

ವಿ.ಬಿ.ಡಿ ಮೇಲ್ವಿಚಾರಕ ಎಸ್.ಸಿ. ರುದ್ರವಾಡಿ ಮಾತನಾಡಿ, ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳುವುದು ಸೊಳ್ಳೆಗಳ ನಿಯಂತ್ರಣಕ್ಕೆ ಮೊದಲ ಆದ್ಯತೆಯಾಗಬೇಕು. ಸೊಳ್ಳೆ ಪರದೆ, ಬೇವಿನ ಸೊಪ್ಪಿನ ಹೊಗೆ ಹಾಗೂ ಸೊಳ್ಳೆ ಬತ್ತಿಗಳನ್ನು ಬಳಸುವ ಮೂಲಕ ಸ್ವಯಂ ರಕ್ಷಣೆ ಮಾಡಿಕೊಳ್ಳಬೇಕು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಯಲ್ಲಪ್ಪ ಚಲವಾದಿ, ಎ.ಪಿ. ಶಾಸ್ತ್ರಿಮಠ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಅನುಸೂಯಾ ತೇರದಾಳ, ಸಾಂಕ್ರಾಮಿಕ ರೋಗಶಾಸ್ತ್ರಜ್ಞ ಪ್ರಶಾಂತ್ ಕಡಿ,?ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ವೀರೇಶ ಎಸ್.ಬಿ, ವಿಜಯ ಹೂಗಾರ, ಕಾಲೇಜಿನ ಶಿಕ್ಷಕರಾದ ಹಿನಾಕೌಸರ್ ಸುತಾರ, ಮುನಿರಾಬೇಗಂ ನದಾಫ್, ಪಾರ್ವತಿ ಹಿರೇಮಠ್, ಮಲ್ಲಿಕಾರ್ಜುನ ಹೆಬ್ಬಾಳ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಚಂಪಾರಣ್ ಸತ್ಯಾಗ್ರಹ ಸ್ವಾತಂತ್ರ್ಯ ಸಂಗ್ರಾಮದ ಐತಿಹಾಸಿಕ ಮೈಲುಗಲ್ಲು: ಸಂಗನಗೌಡ ಬಿರಾದಾರ

ಮುದ್ದೇಬಿಹಾಳ: ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರು 1917ರಲ್ಲಿ ಬಿಹಾರದ ಚಂಪಾರಣ್‌ನಲ್ಲಿ ಇಂಡಿಗೋ ರೈತರ ಪರವಾಗಿ ನಡೆಸಿದ ಪ್ರಥಮ ಅಹಿಂಸಾತ್ಮಕ ಆಂದೋಲನವು ಭಾರತದ ಸ್ವಾತಂತ್ರ್ಯ ಸಂಗ್ರಾಮದ ಇತಿಹಾಸದಲ್ಲೇ ಒಂದು ಮಹತ್ವದ ಮೈಲುಗಲ್ಲು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಸಂಗನಗೌಡ ಬಿರಾದಾರ ಅಭಿಪ್ರಾಯಪಟ್ಟರು.

ಪಟ್ಟಣದ ಶಾ. ಸೋಗಮಲ್ ಪೀರಾಜಿ ಓಸ್ವಾಲ್ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದಲ್ಲಿ ಕರ್ನಾಟಕ ಗಾಂಧಿ ಸ್ಮಾರಕ ನಿಧಿ ಬೆಂಗಳೂರು ಹಾಗೂ ರಾಷ್ಟ್ರಪಿತ ಮಹಾತ್ಮ ಗಾಂಧಿ ಫೌಂಡೇಶನ್ ವಿಜಯಪುರ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಿದ್ದ ಐತಿಹಾಸಿಕ ಚಂಪಾರಣ್ ಸತ್ಯಾಗ್ರಹ – 1917" ಕುರಿತ ವಿಶೇಷ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಗಾಂಧಿ ವಿಚಾರ ವೇದಿಕೆಯ ಸಂಚಾಲಕ ನೇತಾಜಿ ಗಾಂಧಿ ಪ್ರಾಸ್ತಾವಿಕವಾಗಿ ಮಾತನಾಡಿ, ದಕ್ಷಿಣ ಆಫ್ರಿಕಾದಿಂದ ಮರಳಿದ ಗಾಂಧೀಜಿಯವರಿಗೆ ಭಾರತದ ನೈಜ ಸ್ಥಿತಿಯನ್ನು ಪರಿಚಯಿಸಿದ್ದೇ ಚಂಪಾರಣ್ ಚಳವಳಿ. ಕೇವಲ ರಾಜಕೀಯ ಸ್ವಾತಂತ್ರ್ಯವಲ್ಲದೆ, ಭಾರತವನ್ನು ಎಲ್ಲಾ ಬಗೆಯ ಸಾಮಾಜಿಕ ಬಂಧನಗಳಿಂದ ಬಿಡುಗಡೆಗೊಳಿಸುವ ಸಂಕಲ್ಪವನ್ನು ಬಾಪೂಜಿ ಅಲ್ಲಿಂದಲೇ ಆರಂಭಿಸಿದರು" ಎಂದು ಸತ್ಯಾಗ್ರಹದ ಹಿನ್ನೆಲೆಯನ್ನು ವಿವರಿಸಿದರು.

ಎಂ.ಜಿ.ವಿ.ಸಿ. ಮಹಾವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥ ಡಾ. ಪ್ರಕಾಶ ನರಗುಂದ ಉಪನ್ಯಾಸ ನೀಡಿದರು. ಅಧ್ಯಕ್ಷತೆ ವಹಿಸಿದ್ದ ಪ್ರಾಂಶುಪಾಲ ಡಾ. ಎಚ್. ಎ. ಕಟಗೂರು ಮಾತನಾಡಿ, ಮಹಾತ್ಮನ ಜೀವನವೇ ಒಂದು ಸಂದೇಶವಾಗಿದ್ದು, ಅವರ ತತ್ವಗಳನ್ನು ವಿದ್ಯಾರ್ಥಿಗಳು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಕರೆ ನೀಡಿದರು.



**ರಸಪ್ರಶ್ನೆ ಹಾಗೂ ಛಾಯಾಚಿತ್ರ ಪ್ರದರ್ಶನ:** ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ರಸಪ್ರಶ್ನೆ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಗಾಂಧಿ ಸಾಹಿತ್ಯದ ಪುಸ್ತಕಗಳು ಹಾಗೂ ಪ್ರಮಾಣ ಪತ್ರಗಳನ್ನು ನೀಡಿ ಗೌರವಿಸಲಾಯಿತು. ಇದೇ ವೇಳೆ ಮಹಾತ್ಮನ ಬಾಲ್ಯ, ಹೋರಾಟದ ಹಾದಿ ಹಾಗೂ ಸ್ವಾತಂತ್ರ್ಯ ಸಂಗ್ರಾಮದ ಪ್ರಮುಖ ಘಟ್ಟಗಳನ್ನು ಬಿಂಬಿಸುವ 50ಕ್ಕೂ ಹೆಚ್ಚು ಅಪರೂಪದ ಛಾಯಾಚಿತ್ರಗಳ ಪ್ರದರ್ಶನ ಎಲ್ಲರ ಗಮನ ಸೆಳೆಯಿತು.

ಕಾರ್ಯಕ್ರಮದಲ್ಲಿ ಮೌನೇಶ ಸ್ವಾಗತಿಸಿದರು, ಹಂಪಣ್ಣ ನಿರೂಪಿಸಿದರು ಹಾಗೂ ನೇಮಿನಾಥ ವಂದಿಸಿದರು. ವೇದಿಕೆಯ ಮೇಲೆ ಎಲ್. ಎಚ್. ಮಮದಾಪುರ, ಮುತ್ತಣ್ಣ ಗೌಡರ ಸೇರಿದಂತೆ ಕಾಲೇಜಿನ ಪ್ರಾಧ್ಯಾಪಕ ವೃಂದ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಕೈಗಾರಿಕೆ, ಪ್ರವಾಸೋದ್ಯಮ ಅಭಿವೃದ್ಧಿಗೆ ಒತ್ತು



ಹುಬ್ಬಳ್ಳಿ: ಸಂಸ್ಥೆಯು ಆಯೋಜಿಸಿದ್ದ ಇಕಾಮೆಕ್ಸ್–2026ರ ಬೃಹತ್ ಕೈಗಾರಿಕಾ ವಸ್ತು ಪ್ರದರ್ಶನದ ಅಂಗವಾಗಿ "ಉತ್ತರ ಕರ್ನಾಟಕ ಅಭಿವೃದ್ಧಿ ಸಮಾವೇಶ" ಕಾರ್ಯಕ್ರಮವು ಯಶಸ್ವಿಯಾಗಿ ಜರುಗಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿ ಕಾರ್ಯಕ್ರಮ ಉದ್ಘಾಟಿಸಿದ ಕಾನೂನು ಸಚಿವ ಎಚ್.ಕೆ. ಪಾಟೀಲ ಮಾತನಾಡಿ, ಉತ್ತರ ಕರ್ನಾಟಕ ಭಾಗದ ಸಮಗ್ರ ಅಭಿವೃದ್ಧಿಗೆ ಕೈಗಾರಿಕೆಗಳ ವಿಸ್ತರಣೆ ಅತ್ಯಂತ ಅಗತ್ಯವಿದೆ. ಈ ಭಾಗದಲ್ಲಿ ಹೂಡಿಕೆಗಳನ್ನು ಆಕರ್ಷಿಸಲು ಸುಧಾರಿತ ಮೂಲ ಸೌಕರ್ಯ, ಕೈಗಾರಿಕಾ ವಲಯಗಳಿಗೆ ಭೂಮಿಯ ಲಭ್ಯತೆ ಮತ್ತು ಉದ್ಯಮ ಸ್ನೇಹಿ ನೀತಿಗಳನ್ನು ಸರ್ಕಾರ ರೂಪಿಸುತ್ತಿದೆ ಎಂದು ತಿಳಿಸಿದರು.

ಪ್ರವಾಸೋದ್ಯಮವನ್ನು ಕೈಗಾರಿಕಾ ವಲಯದ ಸಮಾನ ಮಹತ್ವದ ಕ್ಷೇತ್ರವಾಗಿ ಪರಿಗಣಿಸಿರುವ ಸರ್ಕಾರ, ಪ್ರವಾಸೋದ್ಯಮ ಕೈಗಾರಿಕಾ ನೀತಿಯಡಿ ಬಂಡವಾಳ ಹೂಡಲು ಮುಂದಾಗುವ ಹೋಟೆಲ್ ಉದ್ಯಮಿಗಳಿಗೆ ಅಗತ್ಯವಾದ ಎಲ್ಲಾ ರೀತಿಯ ಸಹಾಯ–ಸಹಕಾರ, ಸೌಲಭ್ಯಗಳು ಹಾಗೂ ಪ್ರೋತ್ಸಾಹವನ್ನು ನೀಡಲು ಬದ್ಧವಾಗಿದೆ ಎಂದು ಅವರು ತಿಳಿಸಿದರು. ಇದೇ ಸಂದರ್ಭದಲ್ಲಿ ಇಕಾಮೆಕ್ಸ್ –2026 ಪ್ರಯುಕ್ತ ಸಂಸ್ಥೆಯು ಪ್ರಕಟಿಸಿರುವ ಸ್ಮರಣ ಸಂಚಿಕೆಯನ್ನು ಸಚಿವರು ಬಿಡುಗಡೆ ಮಾಡಿದರು. ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಎಫ್. ಹೆಚ್. ಜಕ್ಕಪ್ಪನವರ ಆಗಮಿಸಿದ್ದರು.

ಸಂಸ್ಥೆಯ ಅಧ್ಯಕ್ಷ ಜಿ.ಕೆ. ಅದಪ್ಪಗೌಡರ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷರಾದ ಪ್ರವೀಣ್ ಅಗಡಿ, ಸಿದ್ಧೇಶ್ವರ ಕಮ್ಮಾರ, ವೀರಣ್ಣ ಕಲ್ಗುರಿ, ಗೌರವ ಕಾರ್ಯದರ್ಶಿ ಉದಯ ರೇವಣಕರ್, ಜೊತೆ ಗೌರವ ಕಾರ್ಯದರ್ಶಿ ಪ್ರಕಾಶ ಶೃಂಗೇರಿ, ಮಾಜಿ ಅಧ್ಯಕ್ಷ ಶಂಕರಣ್ಣ ಮುನವಳ್ಳಿ, ಇಕಾಮೆಕ್ಸ್ ಸಮಿತಿ ಚೇರ್ಮನ್ ಎಂ.ಎ. ಕರಮರಿ, ಕೋ–ಚೇರ್ಮನ್ ಜಯಪ್ರಕಾಶ ತೆಂಗಿನಕಾಯಿ ಸೇರಿದಂತೆ ಅನೇಕ ಗಣ್ಯರು, ಉದ್ಯಮಿಗಳು ಮತ್ತು ರಫ್ತುದಾರರು ಉಪಸ್ಥಿತರಿದ್ದರು.

# ಅತಿಥಿ ಶಿಕ್ಷಕರ ಹುದ್ದೆಗೆ ಅರ್ಜಿ ಆಹ್ವಾನ

ವಿಜಯನಗರ (ಹೊಸಪೇಟೆ): ಜಿಲ್ಲೆಯ ಹೊಸಪೇಟೆ, ಕಮಲಾಪುರದ ವ್ಯಾಪ್ತಿಯ ಮೌಲಾನಾ ಆಜಾದ್ ಮಾದರಿ ಪದವಿ ಪೂರ್ವ ಕಾಲೇಜು ಮತ್ತು ಶಾಲೆಯಲ್ಲಿ ಖಾಲಿ ಇರುವ ಅತಿಥಿ ಉಪನ್ಯಾಸಕ ಹಾಗೂ ಶಿಕ್ಷಕರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಪದವಿ ಪೂರ್ವ ಕಾಲೇಜಿನ ಕನ್ನಡ, ಇಂಗ್ಲಿಷ್, ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತ ಮತ್ತು ಜೀವಶಾಸ್ತ್ರ ವಿಷಯಗಳಿಗೆ ಅತಿಥಿ ಉಪನ್ಯಾಸಕರು ಹಾಗೂ ಪ್ರೌಢಶಾಲಾ ವಿಭಾಗದ ಇಂಗ್ಲಿಷ್, ಹಿಂದಿ, ಉರ್ದು, ವಿಜ್ಞಾನ ಮತ್ತು ಸಮಾಜ ವಿಜ್ಞಾನ ವಿಷಯಗಳಿಗೆ ಅತಿಥಿ ಶಿಕ್ಷಕರ ಹುದ್ದೆ ಖಾಲಿ ಇದ್ದು ಆಸಕ್ತರು ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ: 9945951963, 7026653165, 9353211090, 6366705213 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಬಡತನ, ಅವಮಾನ ಮೆಟ್ಟಿ ನಿಂತ ಅಂಬೇಡ್ಕರ್ ವ್ಯಕ್ತಿತ್ವ ಜಗತ್ತಿಗೆ ಮಾದರಿ



ಮುದ್ದೇಬಿಹಾಳ: ಡಾ. ಬಾಬಾಸಾಹೇಬ ಅಂಬೇಡ್ಕರ್ ಅವರು ತಮ್ಮ ಜೀವನದಲ್ಲಿ ಬೆಟ್ಟದಷ್ಟು ಬಡತನ ಮತ್ತು ಹೆಜ್ಜೆ ಹೆಜ್ಜೆಗೂ ಅಪಮಾನಗಳನ್ನು ಎದುರಿಸಿದರೂ, ಅವೆಲ್ಲವನ್ನೂ ಮೆಟ್ಟಿಲುಗಳನ್ನಾಗಿ ಮಾಡಿಕೊಂಡು ಸಾಧನೆಯ ಶಿಖರಕ್ಕೇರಿದ ಮಹಾನ್ ಚೇತನ. ಅವರ ಜೀವನ ಮತ್ತು ವ್ಯಕ್ತಿತ್ವ ಇಡೀ ವಿಶ್ವಕ್ಕೆ ದಾರಿದೀಪವಾಗಿದೆ ಎಂದು ದಲಿತ ಸಾಹಿತಿ ಶಿವಪುತ್ರ ಅಜಮನಿ ಹೇಳಿದರು.

ತಾಲೂಕಿನ ದೇವೂರ ಗ್ರಾಮದಲ್ಲಿ ಹಮ್ಮಿಕೊಳ್ಳಲಾಗಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಅವರು ಮಾತನಾಡುತ್ತಿದ್ದರು.

ಬಾಬಾಸಾಹೇಬರು ಭಾರತದ ಸಂವಿಧಾನವನ್ನು ಕೇವಲ ಲೇಖನಿಯಿಂದ ಬರೆದಿಲ್ಲ, ಬದಲಾಗಿ ತಮ್ಮ ದೇಹದ ರಕ್ತದ ಕಣಕಣದಿಂದ ಬರೆದಿದ್ದಾರೆ. ಈ ದೇಶದ ಶೋಷಿತರಿಗೆ, ನಿರ್ಗತಿಕರಿಗೆ ಹಾಗೂ ದೀನದಲಿತರಿಗೆ ಸಾಮಾಜಿಕ ನ್ಯಾಯ ದೊರಕಿಸಿಕೊಡಲು ಅವರು ನೀಡಿದ ತ್ಯಾಗ ಅಪ್ರತಿಮ. ಸಮಾನತೆಗಾಗಿ ತಮ್ಮ ನಾಲ್ಕು ಮಕ್ಕಳನ್ನು ಮತ್ತು ಮಡದಿಯನ್ನು ಕಳೆದುಕೊಂಡರೂ ಧೃತಿಗೆಡದೆ, ಸ್ವತಃ ಮೇಣದಬತ್ತಿಯಂತೆ ಉರಿದು ಸಮಾಜಕ್ಕೆ ಬೆಳಕು ನೀಡಿದ್ದಾರೆ. ಅಂತಹ ಮಹಾಪುರುಷನ ತ್ಯಾಗವನ್ನು ಭಾರತೀಯರು ಎಂದಿಗೂ ಮರೆಯಬಾರದು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಕಂದಾಯ ನಿರೀಕ್ಷಕ ವೆಂಕಟೇಶ ಅಂಬಿಗೇರ, ಪತ್ರಕರ್ತ ಪರಶುರಾಮ ಕೊಣ್ಣೂರ, ಡಾ. ಪಿ.ಎಚ್. ಉಪ್ಪಲದಿನ್ನಿ ಹಾಗೂ ಡಿ.ಕೆ. ದ್ಯಾವಪ್ಪ ಅವರು ಸಂವಿಧಾನ ಶಿಲ್ಪಿಯ ಜೀವನ ಕುರಿತು ವಿಚಾರ ಲಹರಿ ಹರಿಸಿದರು.

ಇಲಕಲ್ಲ ಡಯಟ್ ಕಾಲೇಜಿನ ಉಪನ್ಯಾಸಕ ಪರಶುರಾಮ ಚಲವಾದಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಬಿ.ಎಸ್. ಚಲವಾದಿ ಕಾರ್ಯಕ್ರಮ ನಿರೂಪಿಸಿದರು. ಸಿದ್ಧಾರ್ಥ ರೂಗಿ ದೇವರಹಿಪ್ಪರಗಿ, ಪ್ರವೀಣ ಕಟ್ಟಿಮನಿ, ಮುತ್ತಣ್ಣ ಕಟ್ಟಿಮನಿ, ಬಸಂತ ಕಟ್ಟಿಮನಿ, ಹಣಮಂತ ಅಡಿಹಾಳ, ಹಣಮಂತ ಎಮ್ಮೆಟ್ಟಿ, ಸಂಗಪ್ಪ ಚೌರಿ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

# ನೂತನ ಲೀಡಕರ್ ಮಳಿಗೆ ಪ್ರಾರಂಭ

ಬಾಗಲಕೋಟೆ: ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮದ ವತಿಯಿಂದ ನವನಗರದ ಸೆಕ್ಟರ್ ನಂ 22 ರಲ್ಲಿ ಡಾ.ಬಾಬು ಜಗಜೀವನ ರಾಂ ಭವನದ ಆವರಣದ ಹಿಂಬಾಗದ ರಸ್ತೆ ಕಡೆ ನೂತನ ಲೀಡಕರ್ ಮಾರಾಟ ಮಳಿಗೆಯನ್ನು ಪ್ರಾರಂಬಿಸಲಾಗಿರುತ್ತದೆ.

ಮಳಿಗೆಯಲ್ಲಿ ಅಪ್ಪಟ ಚರ್ಮದ ಉತ್ಪನ್ನಗಳಾದ ಶ್ಯೂ, ಚಪ್ಪಲಿಗಳು, ಬೆಲ್ಟ್, ಪರ್ಸ ಹಾಗೂ ವ್ಯಾನಿಟಿ ಬ್ಯಾಗಗಳು ದೊರೆಯುತ್ತವೆ. ಮೇ 31 ರವರೆಗೆ ಎಲ್ಲಾ ಚರ್ಮ ಉತ್ಪನ್ನಗಳ ಮೇಲೆ ಶೇ. 15% ರಷ್ಟು ರೀಯಾಯಿತಿ ದರದಲ್ಲಿ ಮಾರಾಟ ಇರುತ್ತದೆ. ಆದ್ದರಿಂದ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ನೂತನ ಮಾರಾಟ ಮಳಿಗೆಗೆ ಬೇಟಿ ನೀಡಿ ರಿಯಾಯಿತಿ ಮಾರಾಟದ ಸದುಪಪಯೋಗ ಪಡೆದುಕೊಳ್ಳಬೇಕು ಎಂದು ಡಾ.ಬಾಬು ಜಗಜೀವನ ರಾಂ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬೆಂಗಳೂರು, ಮೈಸೂರು, ಮಂಗಳೂರಿನಲ್ಲಿ ಸುಸ್ಥಿರ ಡೇಟಾ ಪಾರ್ಕ್ ಸ್ಥಾಪನೆ– ಪ್ರಿಯಾಂಕ್ ಖರ್ಗೆ!



ಬೆಂಗಳೂರು: ರಾಜ್ಯದಲ್ಲಿ ಕೈಗಾರಿಕಾ ಬೆಳವಣಿಗೆಗೆ ಸುಸ್ಥಿರ ಡೇಟಾ ಕೇಂದ್ರಗಳು (ಸಸ್ಟೇನಬಲ್ ಡೇಟಾ ಸೆಂಟರ್ಸ್) ಅಗತ್ಯವಿದ್ದು ಬೆಂಗಳೂರು, ಮೈಸೂರು ಮತ್ತು ಮಂಗಳೂರಿನಲ್ಲಿ ಡೇಟಾ ಪಾರ್ಕ್ ಸ್ಥಾಪಿಸಲು ಗುರುವಾರ ನಡೆದ ಸಂಬಂಧಿತ ಸಚಿವರ ಸಭೆಯಲ್ಲಿ ತೀರ್ಮಾನಿಸಲಾಗಿದೆ.

ನಗರದ ಶಕ್ತಿ ಭವನದಲ್ಲಿ ನಡೆದ ಈ ಪ್ರಾಥಮಿಕ ಸಭೆಯಲ್ಲಿ ಇಂಧನ ಸಚಿವ ಕೆ ಜೆ ಜಾರ್ಜ್, ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ ಮತ್ತು ಐಟಿ ಸಚಿವ ಪ್ರಿಯಾಂಕ್ ಖರ್ಗೆ ಪಾಲ್ಗೊಂಡಿದ್ದರು.

ಬೆಂಗಳೂರಿನಲ್ಲಿ ಹೊಸಕೋಟೆಯ ಸಮೀಪ 500 ಮೆಗಾವ್ಯಾಟ್ ಸಾಮರ್ಥ್ಯದ ಸುಸ್ಥಿರ ಡೇಟಾ ಕೇಂದ್ರ ಪಾರ್ಕ್ ಸ್ಥಾಪಿಸಲಾಗುವುದು. ಪಾವಗಡದಿಂದ ಪೂರೈಕೆಯಾಗುವ ಸೌರ ವಿದ್ಯುತ್ ನೇರವಾಗಿ ಇಲ್ಲಿಗೆ ತಲುಪುತ್ತದೆ. ಜತೆಗೆ ಬೆಂಗಳೂರು ಜಲ ಮಂಡಳಿಯು ಎರಡು ಹಂತಗಳಲ್ಲಿ ಸಂಸ್ಕರಿಸಿದ 60 ಎಂ.ಎಲ್.ಡಿ ನೀರು ಪೂರೈಕೆಗೆ ತೊಂದರೆ ಇಲ್ಲ ಎಂದು ತಿಳಿಸಿದೆ. ಸ್ವತಃ ಉದ್ಯಮಗಳೇ ಈ ನೀರಿನ ಮೂರನೇ ಹಂತದ ಶುದ್ಧೀಕರಣ ಮಾಡಿಕೊಳ್ಳುತ್ತವೆ. ಈ ಮೂರೂ ಪಾರ್ಕುಗಳ ಒಟ್ಟು ಸಾಮರ್ಥ್ಯ 1,000 ಮೆಗಾವ್ಯಾಟ್ ಇರಲಿದೆ ಎಂದು ಸಚಿವರು ಹೇಳಿದ್ದಾರೆ.

ಮಂಗಳೂರಿನಲ್ಲಿ ಕೂಡ ಡೇಟಾ ಪಾರ್ಕ್ ಸ್ಥಾಪನೆಗೆ ಭೂಮಿಯು ಲಭ್ಯವಿದೆ. ಅಲ್ಲಿನ ಬೈಕಂಪಾಡಿ ಕೈಗಾರಿಕಾ ಪ್ರದೇಶದಲ್ಲಿ ಕೆಐಎಡಿಬಿಗೆ ಸೇರಿದ 350 ಎಕರೆ ಇದೆ. ಮೈಸೂರಿನಲ್ಲಿ ಈ ಉದ್ದೇಶಕ್ಕೆ ಸೂಕ್ತ ಜಾಗ ಗುರುತಿಸಲಾಗುವುದು ಎಂದು ಅವರು ವಿವರಿಸಿದ್ದಾರೆ.

ಈ ಪಾರ್ಕ್ ಗಳಲ್ಲಿ ಯಾರೇ ಬಂದ ಡಾಟಾ ಸೆಂಟರ್ ಸ್ಥಾಪನೆಗೆ ಹೂಡಿಕೆ ಮಾಡಿದರೆ ಅವರಿಗೆ ವಿದ್ಯುತ್ ಮತ್ತು ನೀರು ನೀಡಲಾಗುವುದು. ಇದಕ್ಕೆ ಪೂರಕವಾದ ಸಿದ್ಧತೆ ಮಾಡಿಕೊಳ್ಳಲು ಮೂವರು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು. ಸದ್ಯದಲ್ಲೇ ಹೂಡಿಕೆದಾರರ ಜೊತೆಗೂ ಸಭೆ ಮಾಡಲು ಸಚಿವರು ಸಲಹೆ ನೀಡಿದರು.

ಮುಂದಿನ ಹಂತದಲ್ಲಿ ಜಲ ಸಂಪನ್ಮೂಲ ಖಾತೆಯನ್ನು ಹೊಂದಿರುವ ಉಪಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರೂ ಇರುವ ಸಚಿವರ ತಂಡವನ್ನೂ ಮತ್ತು ಉನ್ನತ ಅಧಿಕಾರಿಗಳ ತಂಡವನ್ನೂ ಈ ಸಂಬಂಧ ರಚಿಸಲಾಗುವುದು. ಒಟ್ಟಿನಲ್ಲಿ ತ್ವರಿತವಾಗಿ ಈ ಡೇಟಾ ಪಾರ್ಕುಗಳನ್ನು ಸ್ಥಾಪಿಸಲಾಗುವುದು ಎಂದು ಅವರು ನುಡಿದಿದ್ದಾರೆ.

ಸಭೆಯಲ್ಲಿ ಇಂಧನ ಮತ್ತು ಜಲ ಸಂಪನ್ಮೂಲ ಇಲಾಖೆ ಕಾರ್ಯದರ್ಶಿ ಗೌರವ್ ಗುಪ್ತ, ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್ ಮತ್ತಿತರರು ಉಪಸ್ಥಿತರಿದ್ದರು.

# ಬೆಳಗಾವಿ: ಮಾತಾಡಿದರೆ 5000 ರೂ ದಂಡ, ಮಾಹಿತಿ ಕೊಟ್ಟರೆ 1000 ರೂ ಬಹುಮಾನ; ಕುಟುಂಬಕ್ಕೆ ಸಾಮಾಜಿಕ ಬಹಿಷ್ಕಾರ..!

ಬೆಳಗಾವಿ: ಸಮಾಜದಲ್ಲಿ ಇನ್ನೂ ಸಾಮಾಜಿಕ ಬಹಿಷ್ಕಾರದಂತಹ ಕಠಿಣ ಪದ್ಧತಿಗಳು ಮುಂದುವರಿಯುತ್ತಿರುವುದಕ್ಕೆ ಬೆಳಗಾವಿ ಜಿಲ್ಲೆಯು ಈ ಘಟನೆ ಸಾಕ್ಷಿಯಾಗಿದೆ.

ಕುರಬ ಸಮುದಾಯದ ಒಂದು ಕುಟುಂಬ, ತಮ್ಮದೇ ಸಮುದಾಯದಿಂದ ಬಹಿಷ್ಕಾರಕ್ಕೆ ಒಳಗಾಗಿ ಕೊನೆಗೆ ಗ್ರಾಮ ಬಿಟ್ಟು ತೆರಳಬೇಕಾದ ಪರಿಸ್ಥಿತಿ ಎದುರಿಸಿದೆ.

ಬೆಳಗಾವಿ ಗ್ರಾಮಾಂತರ ಕ್ಷೇತ್ರದ ಕೊಂಡಸ್ಕೊಪ್ಪ ಗ್ರಾಮದಲ್ಲಿರುವ ನರಸೋಬ ಸಾಂಬ್ರೇಕರ್ ಅವರ ಕುಟುಂಬ ಸಮುದಾಯದಿಂದ ಬಹಿಷ್ಕಾರಕ್ಕೊಳಗಾದ ಕುಟುಂಬವಾಗಿದೆ.

ನರಸೋಬ ಸಾಂಬ್ರೇಕರ್ ಅವರು ಸ್ಥಳೀಯ ಬೀರದೇವರ ದೇವಸ್ಥಾನದ ಪೂಜಾರಿಗಳಾಗಿದ್ದು, ದೇವಸ್ಥಾನದ ಆಚರಣೆಗಳಿಗೆ ಸಂಬಂಧಿಸಿದ ವಿವಾದ ಮತ್ತು ಕುಟುಂಬದ ಒಬ್ಬ ಸದಸ್ಯನ ಅಂತರ್ ಸಮುದಾಯ ಸಂಬಂಧ ವಿಚಾರವನ್ನು ಮುಂದಿಟ್ಟುಕೊಂಡು ಗ್ರಾಮದ ಕೆಲವರು ಕುಟುಂಬವನ್ನು ಸಮಾಜದಿಂದ ದೂರ ಇಡುವಂತೆ ಆಜ್ಞೆ ಹೊರಡಿಸಿದ್ದಾರೆ. ಅಲ್ಲದೆ, ಕುಟುಂಬದೊಂದಿಗೆ ಮಾತನಾಡಿದವರಿಗೆ ರೂ.5 ಸಾವಿರ ದಂಡ ವಿಧಿಸಲಾಗುತ್ತದೆ. ಮಾಹಿತಿ ನೀಡಿದವರಿಗೆ ರೂ.1 ಸಾವಿರ ಬಹುಮಾನ ಎಂದೂ ಘೋಷಿಸಲಾಗಿದೆ ಎಂದ ತಿಳಿದುಬಂದಿದೆ.

ಬಹಿಷ್ಕಾರಕ್ಕೆ ಒಳಗಾದ ಕುಟುಂಬದವರು ತೀವ್ರ ಸಂಕಷ್ಟ ಅನುಭವಿಸುತ್ತಿದ್ದು, ಮದುವೆ, ಧಾರ್ಮಿಕ ಕಾರ್ಯಕ್ರಮಗಳು ಸೇರಿದಂತೆ ಯಾವುದೇ ಸಾಮಾಜಿಕ ಚಟುವಟಿಕೆಗೆ ಆಹ್ವಾನ ನೀಡಲಾಗುತ್ತಿಲ್ಲ. ದಿನನಿತ್ಯದ ಬದುಕಿನಲ್ಲಿಯೂ ಗ್ರಾಮಸ್ಥರು ಮಾತನಾಡುವುದನ್ನು ನಿಲ್ಲಿಸಿರುವುದಾಗಿ ಅಳಲು ತೋಡಿಕೊಂಡಿದ್ದಾರೆ.

ಈ ಬಹಿಷ್ಕಾರ ಕೇವಲ ಮಾತಿನ ಮಟ್ಟಕ್ಕೆ ಸೀಮಿತವಾಗದೇ, ಕಲ್ಲು ತೂರಾಟ, ನಿಂದನೆ, ಸಾಮಾಜಿಕವಾಗಿ ಸಂಪೂರ್ಣ ದೂರವಿಟ್ಟು, ಮದುವೆ ಮತ್ತು ಸಮುದಾಯ ಕಾರ್ಯಕ್ರಮಗಳಿಂದ ಹೊರಗುಳಿಸುವ ಮಟ್ಟಕ್ಕೆ ತಲುಪಿದೆ ಎಂದು ಕುಟುಂಬ ಆರೋಪಿಸಿದೆ. ಐದು ವರ್ಷದ ಮಗುವಿನೊಂದಿಗೂ ಕೂಡ ಯಾರು ಮಾತನಾಡುತ್ತಿಲ್ಲ ಎಂದು ಕುಟುಂಬಸ್ಥರು ಕಣ್ಣೀರಿಟ್ಟಿದ್ದಾರೆ.



ಏಪ್ರಿಲ್ 6ರಂದು ನಡೆದ ಗ್ರಾಮ ಸಭೆಯ ನಂತರ ಸಂಪೂರ್ಣವಾಗಿ ನಮ್ಮನ್ನು ಸಮಾಜದಿಂದ ದೂರ ಮಾಡಲಾಗಿದೆ. ಯಾರೂ ಮಾತನಾಡುವುದಿಲ್ಲ, ರಾತ್ರಿ ವೇಳೆ ಮನೆ ಮೇಲೆ ದಾಳಿ ನಡೆಯುತ್ತಿದೆ ಎಂದು ನರಸೋಬಾ ಹೇಳಿದ್ದಾರೆ. ಇದಕ್ಕೆ ಸಂಬಂಧಿಸಿದ ವಿಡಿಯೋ ಸಾಕ್ಷ್ಯಗಳೂ ನಮ್ಮ ಬಳಿ ಇವೆ ಎಂದು ಅವರು ತಿಳಿಸಿದ್ದಾರೆ.

ಈ ಕುರಿತು ಹಿರೇಬಾಗೇವಾಡಿ ಪೊಲೀಸ್ ಠಾಣೆಯಲ್ಲಿ ದೂರು ನೀಡಿದರೂ ಯಾವುದೇ ಪರಿಣಾಮಕಾರಿ ಕ್ರಮ ಕೈಗೊಳ್ಳಲಾಗಿಲ್ಲ ಎಂದು ಕುಟುಂಬ ಆರೋಪಿಸಿದೆ. ದೂರು ಹಿಂಪಡೆಯುವಂತೆ ಗ್ರಾಮಸ್ಥರಿಂದ ಒತ್ತಡವೂ ಇದೆ ಎಂದು ಅವರು ಹೇಳಿದ್ದಾರೆ. ನಿರಂತರ ಹಿಂಸೆ ಮತ್ತು ಒತ್ತಡವನ್ನು ಸಹಿಸಲಾಗದೆ, ಕುಟುಂಬ ಈಗ ಬೆಳಗಾವಿ ನಗರಕ್ಕೆ ತೆರಳಿ ಅಲ್ಲಿ ತಂಗಿದೆ ಎಂದು ತಿಳಿದುಬಂದಿದೆ.

ಇದಕ್ಕೆ ಪ್ರತಿಕ್ರಿಯಿಸಿದ ಗ್ರಾಮ ಪಂಚಾಯತ್ ಸದಸ್ಯರೊಬ್ಬರು, ಕುಟುಂಬವು ಗ್ರಾಮದ ದೇವತೆ ಮತ್ತು ಹಿರಿಯರನ್ನು ಅವಮಾನಿಸಿದ್ದರಿಂದ ಈ ಪರಿಸ್ಥಿತಿ ಎದುರಾಗಿದೆ ಎಂದು ಹೇಳಿ ಆರೋಪಗಳನ್ನು ತಳ್ಳಿ ಹಾಕಿದ್ದಾರೆ.

# ತೀವ್ರ ಬಿಸಿಲು, ಗ್ಯಾಸ್ ಟ್ರಬಲ್: ಏಪ್ರಿಲ್ ತಿಂಗಳಲ್ಲಿ ರಾಜ್ಯದಲ್ಲಿ ವಿದ್ಯುತ್ ಬಳಕೆ ಏರಿಕೆ

ಬೆಂಗಳೂರು: ಹಿಂದಿನ ವರ್ಷಗಳಿಗಿಂತ ಈ ವರ್ಷದ ಏಪ್ರಿಲ್‌ನಲ್ಲಿ ರಾಜ್ಯದಲ್ಲಿ ವಿದ್ಯುತ್ ಬಳಕೆ ಗಣನೀಯವಾಗಿ ಹೆಚ್ಚಾಗಿದೆ.

ಏಪ್ರಿಲ್ 1ರಿಂದ 26ರವರೆಗೆ ಕರ್ನಾಟಕದಲ್ಲಿ 9,101 ಮಿಲಿಯನ್ ಯುನಿಟ್‌ಗಳ (MU) ವಿದ್ಯುತ್ ಬಳಕೆ ದಾಖಲಾಗಿದ್ದು, ಇದು ಕಳೆದ ಐದು ವರ್ಷಗಳಲ್ಲಿ ಅತಿ ಹೆಚ್ಚು ಹಾಗೂ 2025ರ ಇದೇ ಅವಧಿಗಿಂತ ಸುಮಾರು 20% ಹೆಚ್ಚು. ಕಳೆದ ಕೆಲವು ವರ್ಷಗಳಲ್ಲಿ ಈ ಅವಧಿಯ ಬಳಕೆ 7,500ರಿಂದ 8,000 ಒಗಗಳ ನಡುವೆ ಇತ್ತು.

ಇಂಧನ ಇಲಾಖೆಯ ಹಿರಿಯ ಅಧಿಕಾರಿಗಳ ಪ್ರಕಾರ, ವಿಪರೀತ ಬಿಸಿಲು, ಬಿಸಿಲ ದಾಹ ವಿದ್ಯುತ್ ಬಳಕೆಯ ಏರಿಕೆಗೆ ಪ್ರಮುಖ ಕಾರಣವಾಗಿದೆ. ಈ ವರ್ಷ ತೀವ್ರವಾದ ಬಿಸಿಲು ಕಂಡುಬಂದಿದ್ದು, ಜನರು ಏರ್ ಕಂಡೀಷನ್, ಫ್ಯಾನ್ ಗಳ ಮೊರೆ ಹೋಗುವುದು ಹೆಚ್ಚಾಗುತ್ತಿದೆ. ಇದರಿಂದ ವಿದ್ಯುತ್ ಬಳಕೆ ಹೆಚ್ಚಾಗಿದೆ ಎಂದು ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಗೌರವ್ ಗುಪ್ತಾ ತಿಳಿಸಿದ್ದಾರೆ.

ಪೂರ್ವ ಮುಂಗಾರು ಮಳೆಯ ಕೊರತೆಯಿಂದ ಉಷ್ಣಾಂಶ ನಿರಂತರವಾಗಿ ಹೆಚ್ಚಾಗಿದ್ದು, ಜನರು ಏರ್ ಕಂಡಿಷನರ್‌ಗಳು



(ಎಲ) ಮತ್ತು ಕೂಲರ್‌ಗಳನ್ನು ಹೆಚ್ಚಾಗಿ ಬಳಸುತ್ತಿದ್ದಾರೆ. ಇದರಿಂದ ಬೇಡಿಕೆ ಹೆಚ್ಚಾಗಿದೆ.

ಇನ್ನೊಂದೆಡೆ, ಪಶ್ಚಿಮ ಏಷ್ಯಾದ ಸಂಘರ್ಷದಿಂದ ಅನಿಲ ಪೂರೈಕೆಯಲ್ಲಿ ವ್ಯತ್ಯಯ ಉಂಟಾದ ಕಾರಣವೂ ವಿದ್ಯುತ್ ಬಳಕೆಗೆ ಪರಿಣಾಮ ಬೀರಿರಬಹುದು ಎಂದು ಬೆಸ್ಕಾಂ ಅಧಿಕಾರಿಗಳು ತಿಳಿಸಿದ್ದಾರೆ. ಏಪ್ರಿಲ್ ಮೊದಲ ಎರಡು ವಾರಗಳಲ್ಲಿ ಪರಿಸ್ಥಿತಿ ಗಂಭೀರವಾಗಿದ್ದು, ಹಲವಾರು ದೊಡ್ಡ ಹೋಟೆಲ್‌ಗಳು ಇಂಡಕ್ಷನ್ ಸ್ಟೌವ್‌ಗಳನ್ನು ಬಳಸಲು ಆರಂಭಿಸಿದವು. ಇದರಿಂದ ವಿದ್ಯುತ್ ಬಳಕೆ ಹೆಚ್ಚಾಗಿರಬಹುದು ಎಂದು ಅಧಿಕಾರಿಯೊಬ್ಬರು ಹೇಳಿದರು. ಅನಿಲ ಸಿಲಿಂಡರ್‌ಗಳು ಸುಲಭವಾಗಿ ಲಭ್ಯವಾಗುವುದಿಲ್ಲ ಎಂಬ ಭೀತಿಯಿಂದ ಅನೇಕ ಮನೆಗಳು ಇನ್‌ಡಕ್ಷನ್ ಸ್ಟೌವ್‌ಗಳನ್ನು ಬಳಸಲು ಆರಂಭಿಸಿದ್ದು, ಗೃಹ ಬಳಕೆ ವಿದ್ಯುತ್ ಹೆಚ್ಚಾಗಿದೆ. ಹಲವಾರು ವಾಣಿಜ್ಯ ಸಂಸ್ಥೆಗಳು ಅಡುಗೆಗಾಗಿ ಇಂಡಕ್ಷನ್ ಉಪಕರಣಗಳಿಗೆ ಬದಲಾಯಿಸಿರುವುದರಿಂದ ಲೋಡ್ ಸಾಮರ್ಥ್ಯ ಹೆಚ್ಚಿಸಲು ಅರ್ಜಿಗಳನ್ನು ಸಲ್ಲಿಸುತ್ತಿರುವುದಾಗಿ ಬೆಸ್ಕಾಂ ಅಧಿಕಾರಿಗಳು ತಿಳಿಸಿದ್ದಾರೆ. ಆದರೆ, ಇಂತಹ ಉಪಕರಣಗಳ ಬಳಕೆ ಇನ್ನೂ ಕಡಿಮೆ ಮಟ್ಟದಲ್ಲೇ ಇದೆ ಎಂದು ಗೌರವ್ ಗುಪ್ತಾ ಹೇಳಿದರು.

ವಿದ್ಯುತ್ ಬೇಡಿಕೆ ಇನ್ನಷ್ಟು ಹೆಚ್ಚಾದರೂ ನಿರ್ವಹಿಸಲು ಇಲಾಖೆ ಸಿದ್ಧವಾಗಿದೆ. ಪೂರ್ವ ಮಾನ್ಸೂನ್ ಮಳೆಯು ಮುಂದಿನ ಕೆಲವು ದಿನಗಳಲ್ಲಿ ಬೇಡಿಕೆಯನ್ನು ಕಡಿಮೆ ಮಾಡುತ್ತದೆ ಎಂಬ ನಿರೀಕ್ಷೆಯಿದೆ. ಆದರೂ ಪರಿಸ್ಥಿತಿ ಹದಗೆಟ್ಟರೂ ನಾವು ಸಿದ್ಧರಾಗಿದ್ದೇವೆ ಎಂದು ಹೇಳಿದರು.

2023–24ರಲ್ಲಿ 16,110 ಮೆಗಾವಾಟ್ ಇದ್ದದ್ದು, 2024–25ರಲ್ಲಿ 16,985 ಮೆಗಾವಾಟ್ ಮತ್ತು 2025–26ರಲ್ಲಿ 17,330 ಮೆಗಾವಾಟ್ ಆಗಿತ್ತು. ಈ ವರ್ಷ ಅದು 18,478 ಮೆಗಾವಾಟ್‌ಗೆ ಏರಿಕೆಯಾಗಿದೆ.

# ಗದಗ ಪೊಲೀಸರ ಭರ್ಜರಿ ಕಾರ್ಯಾಚರಣೆ: 11 ಅಂತರರಾಜ್ಯ ಕಳ್ಳರ ಬಂಧನ, 1.26 ಕೋಟಿ ಮೌಲ್ಯದ ಚಿನ್ನಾಭರಣ ವಶ!



* ಗದಗದಲ್ಲಿ ಅಂತರರಾಜ್ಯ ಕಳ್ಳರ ಬೃಹತ್ ಬೇಟೆ
* ಹನ್ನೊಂದು ಜನ ಖತರ್ನಾಕ್ ಕಳ್ಳರ ಬಂಧನ
* ಒಂದು ಕೋಟಿಗೂ ಅಧಿಕ ಮೌಲ್ಯದ ವಶ
* 14 ಮನೆ ಕಳ್ಳತನ ಪ್ರಕರಣಗಳು ಪತ್ತೆ

ಗದಗ: ಜಿಲ್ಲೆಯಲ್ಲಿ ಸರಣಿ ಕಳ್ಳತನದ ಮೂಲಕ ಜನರಲ್ಲಿ ನಡುಕ ಹುಟ್ಟಿಸಿದ್ದ ಅಂತರರಾಜ್ಯ ಕಳ್ಳರ ಗ್ಯಾಂಗ್ ಅನ್ನು ಬೆಟಗೇರಿ ವೃತ್ತದ ಪೊಲೀಸರು ಸಿನಿಮೀಯ ರೀತಿಯಲ್ಲಿ ಬಂಧಿಸಿದ್ದಾರೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ನೇತೃತ್ವದ ತಂಡ ನಡೆಸಿದ ಈ ಬೃಹತ್ ಕಾರ್ಯಾಚರಣೆಯಲ್ಲಿ ಕೋಟ್ಯಂತರ ರೂಪಾಯಿ ಮೌಲ್ಯದ ಆಭರಣಗಳನ್ನು ವಶಪಡಿಸಿಕೊಳ್ಳಲಾಗಿದೆ.

ಗದಗ ಜಿಲ್ಲೆಯಲ್ಲಿ ಸರಣಿ ಕಳ್ಳತನ ನಡೆಸುತ್ತಿದ್ದ ಅಂತರರಾಜ್ಯ ತಂಡವನ್ನು ಬೆಟಗೇರಿ ವೃತ್ತದ ಪೊಲೀಸರು ಭರ್ಜರಿ ಕಾರ್ಯಾಚರಣೆಯ ಮೂಲಕ ಮಟ್ಟಹಾಕಿದ್ದಾರೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಮತ್ತು ಡಿವೈಎಸ್‌ಪಿ ಮುರ್ತುಜಾ ಖಾದ್ರಿ ಅವರ ನೇತೃತ್ವದ ತಂಡವು ಹನ್ನೊಂದು ಮಂದಿ ಖತರ್ನಾಕ್ ಕಳ್ಳರನ್ನು ಬಂಧಿಸಿ, ಅವರಿಂದ ಬರೋಬ್ಬರಿ ಒಂದು ಕೋಟಿ ಇಪ್ಪತ್ತಾರು ಲಕ್ಷ ರೂಪಾಯಿ ಮೌಲ್ಯದ ಚಿನ್ನ ಮತ್ತು ಬೆಳ್ಳಿಯ ಆಭರಣಗಳನ್ನು ವಶಪಡಿಸಿಕೊಂಡಿದೆ. ಈ ತಂಡವು ಗದಗ, ಬೆಳಗಾವಿ ಹಾಗೂ ಮಹಾರಾಷ್ಟ್ರದ ವಿವಿಧ ಭಾಗಗಳಲ್ಲಿ ಮನೆಗಳ ಬೀಗ ಮುರಿದು ಕಳ್ಳತನ ಮಾಡುತ್ತಿತ್ತು. ಸಿಪಿಐ ಧೀರಜ್ ಸಿಂಧೆ ಹಾಗೂ ಪಿಎಸ್‌ಐಗಳಾದ ಮಾರುತಿ ಜೋಗದಂಡಕರ ಮತ್ತು ಲಕ್ಷ್ಮಪ್ಪ ಆರಿ ಅವರ ತಂಡವು ಈ ಪ್ರಕರಣವನ್ನು ಭೇದಿಸುವಲ್ಲಿ ಯಶಸ್ವಿಯಾಗಿದ್ದು, ಬಂಧಿತರಿಂದ ಕಳ್ಳತನಕ್ಕೆ ಬಳಸುತ್ತಿದ್ದ ಕಾರು ಮತ್ತು ಬೈಕುಗಳನ್ನು ಕೂಡ ಜಪ್ತಿ ಮಾಡಲಾಗಿದೆ.

ಈ ಬೃಹತ್ ಕಾರ್ಯಾಚರಣೆಯಲ್ಲಿ ಬಂಧಿತರಾದ ಆರೋಪಿಗಳ ವಿವರ ಇಂತಿದೆ: ಸಣ್ಣಸುರೇಶ ಸತ್ಯವ್ವ ಸಿಂಗನೂರ, ಅಳ್ನಾವರದ ನಾಗಪ್ಪ ತಿಮ್ಮಪ್ಪ ದುರಗಮುರಗಿ, ಗರಗದ ಶಿವು ಸುಂಕಪ್ಪ ಬೆಳಗಂಟಿ, ಹುಕ್ಕೇರಿಯ ದೊಡ್ಡಸುರೇಶ ಬಾಬು ತಮ್ಮಣ್ಣವರ, ವೆಂಕಟಾಪೂರದ ಕುಡ್ಡ ಶಂಕರ ಯಲ್ಲಪ್ಪ ಕರಿ, ಧಾರವಾಡದ ಮಂಜುನಾಥ ನಾಗರಾಜ ಲಾದಗಿ, ಹಾನಗಲ್‌ನ ಹುಲಗಪ್ಪ ಫಕ್ಕೀರಪ್ಪ ಬೆಳಗಾಲಪೇಟೆ, ಮುನವಳ್ಳಿಯ ಆನಂದ ದುರಗಪ್ಪ ಯರಗಣ್ಣವರ, ಕಲಬುರ್ಗಿಯ ಗಂಗಾರಾಮ ಬೈರಾಮ ಚವ್ಹಾಣ, ಕನೀರಾಮ ಕಮಸರ ಚವ್ಹಾಣ ಮತ್ತು ಮಹಾರಾಷ್ಟ್ರದ ಶ್ರೀಕಾಂತ ಶರಣಪ್ಪ ದೂಧಳೆ. ಈ ಆರೋಪಿಗಳ ಬಂಧನದಿಂದಾಗಿ ಗದಗ ಮತ್ತು ಬೆಳಗಾವಿ ಜಿಲ್ಲೆಯ ಸುಮಾರು ಹದಿನಾಲ್ಕು ಪ್ರಮುಖ ಕಳ್ಳತನ ಪ್ರಕರಣಗಳು ಇತ್ಯರ್ಥಗೊಂಡಂತಾಗಿದ್ದು, ಇಡೀ ಪೊಲೀಸ್ ತಂಡದ ಶ್ರಮಕ್ಕೆ ಸಾರ್ವಜನಿಕ ವಲಯದಲ್ಲಿ ಮೆಚ್ಚುಗೆ ವ್ಯಕ್ತವಾಗಿದೆ.

# ಬಡ ಮಕ್ಕಳು ಹಾಗೂ ದೀನದಲಿತರಿಗೆ ಮತ್ತು ಪ್ರಜಾ ರಕ್ಷಕರಾದ ಅಂಬರೀಷವರ್ಮ ಅವರ ಧರ್ಮಪತ್ನಿ ಶ್ರೀಮತಿ ಸುಶೀಲಾ ಅವರು ತ್ಯಾಗಿ ಮತ್ತು ಧೀಮಂತ ರಾಜಮಾತೆಯಾಗಿದ್ದರು



ಗೋಕಾಕ : ಕಾರ್ಯಕ್ರಮದಲ್ಲಿ ಭಾಗವಹಿಸಿರುವ ಗಣ್ಯರು.

ಗೋಕಾಕ: ಬಡ ಮಕ್ಕಳು ಹಾಗೂ ದೀನದಲಿತರಿಗೆ ಮತ್ತು ಪ್ರಜಾ ರಕ್ಷಕರಾದ ಅಂಬರೀಷವರ್ಮ ಅವರ ಧರ್ಮಪತ್ನಿ ಶ್ರೀಮತಿ ಸುಶೀಲಾ ಅವರು ತ್ಯಾಗಿ ಮತ್ತು ಧೀಮಂತ ರಾಜಮಾತೆಯಾಗಿದ್ದರು ಎಂದು ಕೌಜಲಗಿಯ ಹಿರಿಯ ಸಾಹಿತಿ ಪ್ರಕಾಶ ಕೋಟಿನತೋಟ ಹೇಳಿದರು.

ಗೋಕಾವಿ ಗೆಳೆಯರ ಬಳಗ ನಗರದ ಹೊರವಲಯದ ಯೋಗಿಕೊಳ್ಳ ರಸ್ತೆಯ ದೋಂಡಿಬಾ ಜಾಧವ ತೋಟದಲ್ಲಿ ಹಮ್ಮಿಕೊಡಿದ್ದ ಜಿಲ್ಲೆಯ ಗೋಕಾಕ ತಾಲೂಕಿನ ಕೌಜಲಗಿಯ ದೇಸಾಯಿ ಸಂಸ್ಥಾನದ ಕೊನೆಯ ಕೊಂಡಿ ರಾಜಮಾತೆ ಸುಶೀಲಾವರ್ಮ ಅಂಬರೀಷವರ್ಮ ದೇಸಾಯಿ (95) ಅವರ ಶೃದ್ಧಾಜಲಿ ಸಭೆಯನ್ನು ಉದ್ದೇಶಿಸಿ ಅವರು ಮಾತನಾಡಿದರು.

ಮೂಲ ಪುರುಷ ಭೀಮಪ್ಪಾ ಗಿ.ದೇಸಾಯಿ ಅವರ ಹಿರಿಯಸೊಸೆಯಾಗಿದ್ದರು. ದೈವಪುರುಷ ಅಂಬರೀಷವರ್ಮ ಭೀ ದೇಸಾಯಿ ಅವರ ಧರ್ಮಪತ್ನಿ.ಆದರ್ಶ ದಂಪತಿಯಾದ ಇವರು ಬೆಂಗಳೂರಿನ ಕೋರಮಂಗಲ ಹತ್ತಿರ ವಿಶ್ವಮೈತ್ರಿ ಸಂಸ್ಥೆ ಮೂಲಕ ಅನೇಕ ಸಮಾಜ ಮತ್ತು ಆದ್ಯಾತ್ಮಪರ ಕಾರ್ಯ ನಡೆಸಿಕೊಂಡು ಬಂದಿದ್ದರು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹಿರಿಯ ಸಾಹಿತಿ ಡಾ.ಲಕ್ಷ್ಮಣ ಚೌರಿ ವಹಿಸಿದ್ದರು.

ಈ ಸಂದರ್ಭದಲ್ಲಿ ಹಿರಿಯ ಬಯಲಾಟ ಕಲಾವಿದ ಸಾಹಿತಿ ಈಶ್ವರಚಂದ್ರ ಬೆಟಗೇರಿ,ಬಸವಜ್ಯೋತಿ ಐಟಿಐ ಕಾಲೇಜಿನ ಚೇರಮನ್ ಅಶೋಕ ಲಗಮಪ್ಪಗೋಳ,ಸಿರಿಗನ್ನಡ ಮಹಿಳಾ ವೇದಿಕೆ ರಾಜ್ಯಾಧ್ಯಕ್ಷೆ ರಜನಿ ಜೀರಗ್ಯಾಳ, ಸಾಹಿತಿ,ಪತ್ರಕರ್ತ ಸಾದಿಕ ಹಲ್ಯಾಳ,ಭಾರತಿ ಬಾವಲತ್ತಿ, ಪ್ರಾ.ಜಯಾನಂದ ಮಾದರ, ಚೇತನ ಸುಣಗಾರ, ಯೋಗ ಶಿಕ್ಷಕ ಆನಂದ ಸೋರಗಾವಿ ಉಪಸ್ಥಿತರಿದ್ದರು .

# ಕುರುಹಿನಶೆಟ್ಟಿ ಸೊಸೈಟಿಗೆ 7.45 ಕೋಟಿ ರೂ ಲಾಭ– ಸುಭಾಸ ಬೆಳಕೂಡ

ಮೂಡಲಗಿ: ಪಟ್ಟಣದ ಪ್ರತಿಷ್ಠಿತ ಸಹಕಾರಿ ಸಂಸ್ಥೆಯಲ್ಲಿ ಒಂದಾದ ಕುರುಹಿನಶೆಟ್ಟಿ ಅರ್ಬನ್ ಕೋ–ಆಪ್ ಕ್ರೆಡಿಟ್ ಸೊಸೈಟಿಗೆ 2025–26ನೇ ಹಣಕಾಸಿನ ವರ್ಷದ ಕೊನೆಯಲ್ಲಿ 7.45 ಕೊಟಿ ರೂ. ಲಾಭ ಗಳಿಸಿ ಪ್ರಗತಿಯಲ್ಲಿ ಸಾಗಿದೆ ಎಂದು ಸೊಸೈಟಿ ಅಧ್ಯಕ್ಷ ಸುಭಾಸ ಬೆಳಕೂಡ ಅವರು ತಿಳಿಸಿದರು.



ಸೊಸೈಟಿಯ ಸಭಾ ಭವನದಲ್ಲಿ ಕರೆದಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಸೊಸೈಟಿಯು ಈಗಾಗಲೇ 18 ಶಾಖೆಗಳನ್ನು ಹೊಂದಿದ್ದು, ಶೀಘ್ರದಲ್ಲಿ ಇನ್ನೂ 5 ಶಾಖೆಗಳನ್ನು ಪ್ರಾರಂಭಿಸಲಾಗುವದು. ಶೇರುದಾರರಿಗೆ ಶೇ.15 ರಷ್ಟು ಲಾಭಾಂಶ ವಿತರಿಸುಲಾಗುವುದು ಎಂದ ಅವರು ಸದ್ಯ ಸೊಸೈಟಿಯು 4.73 ಕೋಟಿ ರೂ ಶೇರು ಬಂಡವಾಳ, 30.84 ಕೋಟಿ ರೂ ನಿಧಿಗಳು, 333.89 ಕೋಟಿ ರೂ ಠೇವುಗಳು, 118.46 ಕೋಟಿ ರೂ. ಗುಂತಾವಣಿಗಳನ್ನು ಹೊಂದಿದೆ. ವಿವಿಧ ಕ್ಷೇತ್ರಗಳಿಗೆ 237.54 ಕೋಟಿ ರೂ ಸಾಲ ವಿತರಿಸಿ 391.46 ಕೋಟಿ ರೂ.ದುಡಿಯುವ ಬಂಡವಾಳ ಮತ್ತು 1.742 ಕೋಟಿ ರೂ. ವಾರ್ಷಿಕ ವ್ಯವಹಾರ ಮಾಡಿದೆ, ಗ್ರಾಹಕರು ಸಕಾಲದಲ್ಲಿ ಸಾಲ ಮರು ಪಾವತಿ ಮಾಡುವದರಿಂದ ಮತ್ತು ಆಡಳಿತ ಮಂಡಳಿ ಮತ್ತು ಸಿಬ್ಬಂದಿ ವರ್ಗದವರ ನಿಶ್ವಾರ್ಥ ಸೇವೆ ಹಾಗೂ ಎಲ್ಲರ ಸಹಕಾರದಿಂದ ಸೊಸೈಟಿಯು ಹೆಚ್ಚಿನ ಲಾಭ ಹೊಂದಲು ಸಹಕಾರಿಯಾಗಿದೆ ಎಂದರು.

ನಿರ್ದೇಶಕ ಬಸಪ್ಪ ಮುಗಳಖೋಡ ಮಾತನಾಡಿ, ಸೊಸೈಟಿಯು ಶೈಕ್ಷಣಿಕ, ಸಾಮಾಜಿಕ ಕಾರ್ಯಗಳನ್ನು ಕೈಗೊಂಡು, ಸೊಸೈಟಿಯ 18 ಶಾಖೆಗಳಲ್ಲಿ ಈಗಾಗಲೇ 5 ಶಾಖೆಗಳು ಸ್ವಂತ ಕಟ್ಟಡ ಹೊಂದಿವೆ, ಇನ್ನೂಳಿದ ಶಾಖೆಗಳಿ ನಿವೇಶ ಖರಿದಿಸುವ ಗುರಿ ಹೊಂದಲ್ಲಾಗಿದು, ಶೀಘ್ರದಲ್ಲಿ ಇನ್ನೂ ಐದು ಶಾಖೆಗಳನ್ನು ಆರಂಭಿಸಲಾಗುವುದು ಎಂದರು.

ಈ ಸಂದರ್ಭದಲ್ಲಿ ಸೊಸೈಟಿಯ ಉಪಾಧ್ಯಕ್ಷ ಇಸ್ಮಾಯಿಲ್ ಕಳ್ಳಿಮನಿ, ಲಕ್ಕಪ್ಪ ಪೂಜೇರಿ, ಗೋಡಚೆಪ್ಪ ಮುರಗೋಡ, ಬಸವರಾಜ ಬೆಳಕೂಡ, ವಿಶಾಲ ಶೀಲವಂತ, ರಾಮಪ್ಪ ಬಳೆಗಾರ, ರುಕ್ಮವ್ವಾ ಪೂಜೇರಿ, ಶಾಂತವ್ವಾ ಬೋರಗಲ್, ಶ್ಯಾಲನ್ ಕೊಡತೆ, ಉಮಾ ಬೆಳಕೂಡ ಉಪಸ್ಥಿತರಿದ್ದರು. ಪ್ರಧಾನ ವ್ಯವಸ್ಥಾಪಕ ರಮೇಶ ವಂಟಗೋಡಿ ಸ್ವಾಗತಿಸಿ, ವಂದಿಸಿದರು.

# ಫಿಟ್ಟರ್ ಮತ್ತು ಎಲೆಕ್ಟ್ರೀಷಿಯನ್ ವೃತ್ತಿಗಳ ತರಬೇತಿಗಾಗಿ ಅರ್ಜಿ ಆಹ್ವಾನ

ಧಾರವಾಡ: ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಅಮ್ಮಿನಭಾವಿಯಲ್ಲಿ ಎಸ್.ಎಸ್.ಎಲ್.ಸಿ ಉತ್ತೀರ್ಣರಾದವರಿಗೆ ಫಿಟ್ಟರ್ ಮತ್ತು ಎಲೆಕ್ಟ್ರೀಷಿಯನ್ ವೃತ್ತಿಗಳಿಗೆ ತರಬೇತಿ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತರು ವೆಬ್‌ಸೈಟ್ www.cite.karnataka.gov.in ಮೂಲಕ ಮೇ 8, 2026 ರೊಳಗಾಗಿ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 9972946660 ಗೆ ಸಂಪರ್ಕಿಸಬಹುದು ಎಂದು ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001